ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 90

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಶನಿವಾರ: 14-03-2026

**SEHRI & IFTARI TIME**

DAY :SATURDAY

RAMZAN : 24

DATE: 14.03.2026

END TIME OF SEHRI :5:15 AM

FAJAR AZAAN : 5:20 AM

IFTAR TIME : 6:33 PM

ಸೈಯದ್ ಅಹ್ಮದ್ ಹುಸೇನಿ ಮತ್ ವಾಲೆ
ಕಾರ್ಯದರ್ಶಿಗಳು : ಮತ್ ವಾಲೆ
ಸಾಹೇಬ್ ಪಬ್ಲಿಕ್ ಸ್ಕೂಲ್ ಮಾನ್ವಿ
ಸಂಪಾದಕರು : ಧೈರ್ಯದ ದಾರಿ ಕನ್ನಡ
ದಿನಪತ್ರಿಕೆ



ವಿಧಾನ ಸೌಧದಲ್ಲಿ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರಿಗೆ ದೂರು

## ನೀರಮಾನ್ವಿ ಗಣಿ ಹಗರಣದ ಬಗ್ಗೆ ಉನ್ನತ ಮಟ್ಟದ ತನಿಖೆಗೆ ಗುರುರಾಜ ನಾಗಲಾಪುರ ಆಗ್ರಹ.

2ನೇಪುಟಕ್ಕೆ

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626

# ಹೋಟೆಲ್, ಕೈಗಾರಿಕೆಗೆ ಗ್ಯಾಸ್ ಟ್ರಬಲ್, ಗ್ರಾಹಕರಿಗೆ ದರ ಏರಿಕೆ ಬಿಸಿ

**ಬೆಂಗಳೂರು, ಮಾ. 13–** ಪಶ್ಚಿಮ ಏಷ್ಯಾದಲ್ಲಿ ಯುದ್ಧ ಮುಂದುವರಿದಿರುವ ಹಿನ್ನೆಲೆಯಲ್ಲಿ ವಾಣಿಜ್ಯ ಎಲ್‌ಪಿಜಿ ಸರಬರಾಜಿನಲ್ಲಿ ಬವಣೆ ತಪ್ಪಿಲ್ಲ. ಹೋಟೆಲ್‌ಗಳು ಪಿಜಿ ಹಾಸ್ಟೆಲ್‌ಗಳು, ಶಾಲಾ ಮಕ್ಕಳಿಗೆ ಬಿಸಿಯೂಟ ಮತ್ತು ಕೈಗಾರಿಕೆಗಳಿಗೂ ವಾಣಿಜ್ಯ ಬಳಕೆಯ ಗ್ಯಾಸ್ ಸಮಸ್ಯೆ ಎದುರಾಗಿದೆ. ಇದರಿಂದಾಗಿ ಕೈಗಾರಿಕೆಗಳು ಮತ್ತು ಸಣ್ಣ ಕೈಗಾರಿಕೆಗಳ ಉದ್ಯಮಿಗಳು ನಷ್ಟ ಅನುಭವಿಸುವ ಆತಂಕದಲ್ಲಿದ್ದಾರೆ.

ಈಗಾಗಲೇ ವಾಣಿಜ್ಯ ಸಿಲಿಂಡರ್ ಪೂರೈಕೆಯಲ್ಲಿ ಭಾರಿ ಪ್ರಮಾಣದಲ್ಲಿ ವ್ಯತ್ಯಯವಾಗಿರುವ ಹಿನ್ನೆಲೆಯಲ್ಲಿ ಹೋಟೆಲ್ ಉದ್ಯಮ ನಲುಗಿದೆ. ಕಾರ್ಮಿಕರು ಕೆಲಸ ಕಳೆದುಕೊಳ್ಳುವ ಆತಂಕವೂ ಎದುರಾಗಿದೆ. ಬೆಂಗಳೂರಿನ ಹೃದಯಭಾಗವಾದ ಮೆಜೆಸ್ಟಿಕ್, ಬಸವನಗುಡಿ, ಮಲ್ಲೇಶ್ವರಂ, ರಾಜಾಜಿನಗರ ಸೇರಿದಂತೆ ಪ್ರಮುಖ ನಗರಗಳ ಪ್ರದೇಶದಲ್ಲಿ ಹೋಟೆಲ್‌ಗಳು ಬಾಗಿಲು ಮುಚ್ಚಿವೆ. ಹೋಟೆಲ್ ಊಟವನ್ನೇ ನಂಬಿಕೊಂಡಿರುವ ಗ್ರಾಹಕರಿಗೂ ಸಂಕಷ್ಟ ಎದುರಾಗಿದೆ.

**ಕೈಗಾರಿಕಾ ವಲಯಕ್ಕೆ ಹೊಡೆತ**–ಬೆಂಗಳೂರಿನಲ್ಲಿ ಗ್ಯಾಸ್ ಅಭಾವ ತಲೆದೋರಿರುವ ಬೆನ್ನಲ್ಲೇ ಕೈಗಾರಿಕಾ ವಲಯಕ್ಕೂ ಹೊಡೆತ ಬಿದ್ದಿದೆ. ಪೀಣ್ಯ ಕೈಗಾರಿಕಾ ಪ್ರದೇಶಕ್ಕೆ ಪೂರೈಕೆಯಾಗುತ್ತಿದ್ದ ಇಂಡಸ್ಟ್ರಿಯಲ್ ಗ್ಯಾಸ್ ಕೊರತೆ ಉಂಟಾಗಿರುವುದೇ ಇದಕ್ಕೆ ಕಾರಣ.

ಪೀಣ್ಯದಲ್ಲಿರುವ ಈ ಕೈಗಾರಿಕಾ ಪ್ರದೇಶ ದಕ್ಷಿಣ ಏಷ್ಯಾದಲ್ಲಿ ಅತಂತ್ಯ ದೊಡ್ಡ ಕೈಗಾರಿಕಾ ಪ್ರದೇಶ ಎಂಬ ಖ್ಯಾತಿ ಪಡೆದಿದೆ. ಈ ಪ್ರದೇಶದಲ್ಲಿರುವ ಬಹುತೇಕ ಕೈಗಾರಿಕೆಗಳು ಇಂಡಸ್ಟ್ರಿಯಲ್ ಗ್ಯಾಸ್ ಅನ್ನು ಪ್ರಮುಖವಾಗಿ ಅವಲಂಬಿಸಿದೆ.

ವಿಶೇಷವಾಗಿ ಮೆಟಲ್ ಕಟಿಂಗ್, ವೆಲ್ಡಿಂಗ್ ಸೇರಿದಂತೆ ಹಲವು ಉತ್ಪಾದನಾ ಕಾರ್ಯಗಳಿಗೆ ಈ ಗ್ಯಾಸ್ ಅಗತ್ಯವಾಗಿದೆ.



ಈ ನಡುವೆ ಇಂಡಸ್ಟ್ರಿಯಲ್ ಗ್ಯಾಸ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಿರುವುದರಿಂದ, ಕೈಗಾರಿಕಾ ಚಟುವಟಿಕೆಗಳಿಗೆ ಅಡಚಣೆ ಎದುರಾಗುವ ಸಾಧ್ಯತೆ ಇದೆ. ಗ್ಯಾಸ್ ಪೂರೈಕೆ ಸರಿಯಾಗದಿದ್ದರೆ ಸುಮಾರು 6 ಸಾವಿರಕ್ಕೂ ಅಧಿಕ ಕೈಗಾರಿಕೆಗಳು ಬಂದ್ ಆಗುರ ಸಾಧ್ಯತೆಯಿದೆ.

ಈ ಬಗ್ಗೆ ಪೀಣ್ಯ ಕೈಗಾರಿಕಾ ಸಂಘದ ಅಧ್ಯಕ್ಷ ದಾನಪ್ಪ ಮಾತನಾಡಿ, ಪೀಣ್ಯದಲ್ಲಿ ಒಟ್ಟು 12 ಸಾವಿರಕ್ಕೂ ಅಧಿಕ ಕೈಗಾರಿಕೆಗಳು ಕಾರ್ಯನಿರ್ವಹಿಸುತ್ತಿದ್ದು, ಅವುಗಳಲ್ಲಿ ಬಹುತೇಕ ಕೈಗಾರಿಕೆಗಳು ಇಂಡಸ್ಟ್ರಿಯಲ್ ಗ್ಯಾಸ್ ಮೇಲೆ ಅವಲಂಬಿತವಾಗಿವೆ ಎಂದು ತಿಳಿಸಿದ್ದಾರೆ.

ಗ್ಯಾಸ್ ಕೊರತೆ ಮುಂದುವರೆದರೆ ಉತ್ಪಾದನಾ ಚಟುವಟಿಕೆಗಳು ಸಂಪೂರ್ಣವಾಗಿ ಸ್ಥಗಿತಗೊಳ್ಳುವ ಸಾಧ್ಯತೆ ಇದೆ. ಇದರಿಂದ ಸಾವಿರಾರು ಕಾರ್ಮಿಕರ ಉದ್ಯೋಗಕ್ಕೂ ಕುತ್ತು ಬೀಳಲಿದೆ.

ಇದೇ ಸಮಸ್ಯೆ ಇತರೆ ರಾಜ್ಯಗಳಲ್ಲಿ ಕಾಣಿಸಿಕೊಳ್ಳದಿದ್ದರೂ, ಕರ್ನಾಟಕದಲ್ಲಿ ಮಾತ್ರ ಏಕೆ ಈ ರೀತಿಯ ಸಮಸ್ಯೆ ಎದುರಾಗುತ್ತಿದೆ ಎಂಬ ಪ್ರಶ್ನೆಯನ್ನು ಕೈಗಾರಿಕೋದ್ಯಮಿಗಳು ಎತ್ತಿದ್ದಾರೆ.

ಈ ಹಿನ್ನೆಲೆಯಲ್ಲಿ ಸಮಸ್ಯೆ ಪರಿಹಾರಕ್ಕಾಗಿ ಪೀಣ್ಯ ಕೈಗಾರಿಕಾ ಸಂಘ ಕೈಗಾರಿಕೋದ್ಯಮಿಗಳ ಜೊತೆ ಸಭೆ ನಡೆಸಿದ್ದು, ಸರ್ಕಾರ ತಕ್ಷಣ ಮಧ್ಯಪ್ರವೇಶಿಸಿ ಗ್ಯಾಸ್ ಪೂರೈಕೆ ಸರಿಪಡಿಸಬೇಕೆಂದು ಒತ್ತಾಯಿಸಿದೆ.

**ಶೇ. 30 ರಷ್ಟು ಹೋಟೆಲ್‌ಗಳು ಬಂದ್**–ಬೆಂಗಳೂರಿನಲ್ಲಿ ಎಲ್ ಪಿಜಿ ಕೊರತೆಯಿಂದಾಗಿ ಹೋಟೆಲ್ ಮತ್ತು ರೆಸ್ಟೋರೆಂಟ್‌ಗಳು ಬಂದ್ ಆಗಿವೆ. ಇದರಿಂದಾಗಿ ಕಾರ್ಮಿಕರು ಕೂಡ ಕೆಲಸವಿಲ್ಲದೆ ಸಂಕಷ್ಟಕ್ಕೆ ಸಿಲುಕಿದ್ದಾರೆ.

ಶೇ. 30 ರಷ್ಟು ದರ್ಶಿನಿ ಹೋಟೆಲ್‌ಗಳು ಬಂದ್ ಆಗಿವೆ. ಕೆಲವು ಹೋಟೆಲ್‌ಗಳು ದಿನನಿತ್ಯ ತಯಾರಿಸುವ ಅಡುಗೆ ಪದಾರ್ಥಗಳ ಪಟ್ಟಿ ಸಂಖ್ಯೆಯನ್ನು ಕಡಿತ ಮಾಡಿದೆ. ಸಿಲಿಂಡರ್ ಕೊರತೆ ಪರಿಣಾಮ ಹೋಟೆಲ್‌ಗಳಲ್ಲಿ ತಿಂಡಿ ತಿನಿಸು ದರವೂ ದುಬಾರಿಯಾಗಿದೆ. ಕೆಲವು ಹೋಟೆಲ್‌ಗಳಲ್ಲಿ ಸೌದೆ ಒಲೆಯಲ್ಲಿ ಆಹಾರ ಪದಾರ್ಥಗಳನ್ನು ಸಿದ್ಧಪಡಿಸಲಾಗುತ್ತಿದೆ. ಹೀಗಾಗಿ ಸೌದೆಗಳಿಗೆ ಇನ್ನಿಲ್ಲದ ಬೇಡಿಕೆ ಕಂಡು ಬಂದಿದೆ. ಮತ್ತೇ ಹೋಟೆಲ್‌ಗಳಲ್ಲಿ ಇಂಡಕ್ಷನ್ ಸ್ಟೌವ್‌ಗೆ ಮೊರೆ ಹೋಗಿದ್ದಾರೆ. ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ವೆಡ್ಲಿಂಗ್, ಪೌಡರ್ ಕೊಟಿಂಗ್, ಆಹಾರ ಸಂಸ್ಕರಣ ಹಾಗೂ ಔಷಧಿಯ ಉತ್ಪಾದನೆಗಳಿಗೆ ಸಿಲಿಂಡರ್‌ಗಳನ್ನೇ ಅವಲಂಭಿಸಿದೆ. ಈಗ ಕೊಲ್ಲಿ ರಾಷ್ಟ್ರಗಳಲ್ಲಿ ಯುದ್ಧ ನಡೆಯುತ್ತಿರುವುದರಿಂದ ಕೈಗಾರಿಕೆಗಳ ದಿನನಿತ್ಯದ ಕೆಲಸಗಳಿಗೆ ದೊಡ್ಡ ಹೊಡೆತ ಬಿದ್ದಿದೆ. ಐಟಿ ಕಂಪನಿಗಳು ವರ್ಕ್ ಫ್ರಮ್ ಹೋಂಗೆ ಅವಕಾಶ ನೀಡುವ ಬಗ್ಗೆಯೂ ಚಿಂತನೆ ನಡೆಸಿವೆ.

**ಗ್ರಾಹಕರ ಆಕ್ರೋಶ**–ವಾಣಿಜ್ಯ ಬಳಕೆ ಎಲ್‌ಪಿಜಿ ಅಭಾವದ ಸಮಸ್ಯೆಯನ್ನು ಮುಂದಿಟ್ಟುಕೊಂಡು ಹೋಟೆಲ್‌ಗಳು ಆಹಾರ ಪದಾರ್ಥಗಳ ದರವನ್ನು ಏರಿಕೆ ಮಾಡಿರುವ ಬಗ್ಗೆ ಗ್ರಾಹಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಒಂದು ಲೋಟ ಕಾಫಿಗೆ 5 ರೂಪಾಯಿಗೆ ಏರಿಕೆಯಾಗಿದೆ.ಕಾಫಿ, ಟೀ 2ನೇಪುಟಕ್ಕೆ

## ಸಿರವಾರ: ಅಂಗನವಾಡಿ ಮಕ್ಕಳಿಗೆ ಮೊಟ್ಟೆ ವಿತರಿಸಿದ ಪ.ಪಂ ಸದಸ್ಯ ಎಚ್. ಮಾರ್ಕಪ್ಪ



ಧೈರ್ಯದ ದಾರಿ

**ಸಿರವಾರ:** ಮಕ್ಕಳ ದೈಹಿಕ ಮತ್ತು ಮಾನಸಿಕ ಬೆಳವಣಿಗೆಗೆ ಪೌಷ್ಟಿಕ ಆಹಾರ ಅತ್ಯಗತ್ಯವಾಗಿದ್ದು, ಸರ್ಕಾರ ನೀಡುವ ಸೌಲಭ್ಯಗಳನ್ನು ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಬೇಕು ಎಂದು ಪಟ್ಟಣ ಪಂಚಾಯಿತಿ ಸದಸ್ಯ ಎಚ್. ಮಾರ್ಕಪ್ಪ ಅವರು ಕರೆ ನೀಡಿದರು. ಪಟ್ಟಣದ 08ನೇ ವಾರ್ಡ್‌ನ ಅಂಗನವಾಡಿ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದಲ್ಲಿ ಮೂರು ವರ್ಷದೊಳಗಿನ ಮಕ್ಕಳ ತಾಯಂದಿರಿಗೆ ಪೌಷ್ಟಿಕಾಂಶಯುಕ್ತ ಮೊಟ್ಟೆಗಳನ್ನು ವಿತರಿಸಿ ಅವರು ಮಾತನಾಡಿದರು.

**ಪೌಷ್ಟಿಕಾಂಶದ ಮಹತ್ವ:** ಸಣ್ಣ ವಯಸ್ಸಿನಲ್ಲೇ ಮಕ್ಕಳಿಗೆ ಉತ್ತಮ ಆಹಾರ ನೀಡಿದರೆ ಭವಿಷ್ಯದಲ್ಲಿ ಸದೃಢ ಪ್ರಜೆಗಳಾಗಲು ಸಾಧ್ಯ. ಈ ಹಿನ್ನೆಲೆಯಲ್ಲಿ ಅಂಗನವಾಡಿ ಮೂಲಕ ಸರ್ಕಾರ ನೀಡುವ ಮೊಟ್ಟೆ, ಹಾಲಿನಂತಹ ಸೌಲಭ್ಯಗಳು ತಾಯಂದಿರಿಗೆ ಸಹಕಾರಿಯಾಗಲಿವೆ ಎಂದು ಮಾರ್ಕಪ್ಪ ತಿಳಿಸಿದರು.

**ವಿತರಣೆ:** ವಾರ್ಡ್‌ನ 08ವರ್ಷದ ಮಕ್ಕಳ ತಾಯಂದಿರಿಗೆ ಈ ಸಂದರ್ಭದಲ್ಲಿ ಮೊಟ್ಟೆಗಳನ್ನು ವಿತರಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

**ಉಪಸ್ಥಿತಿ:** ಕಾರ್ಯಕ್ರಮದಲ್ಲಿ ಅಂಗನವಾಡಿ ಶಿಕ್ಷಕಿ ವನಿತಾ, ಪ್ರಮುಖರಾದ ನಜೀರ್ ಸಾಬು ಸೇರಿದಂತೆ ವಾರ್ಡ್‌ನ ನಾಗರಿಕರು ಮತ್ತು ಮಕ್ಕಳ ಪೋಷಕರು ಹಾಜರಿದ್ದರು.

## ಕುಡಿಯುವ ನೀರಿನ ಸಮರ್ಪಕ ಪೂರೈಕೆಗಾಗಿ ಬಿಜೆಪಿಯಿಂದ ಪುರಸಭೆ ಮುಖ್ಯಾಧಿಕಾರಿಗಳಿಗೆ ಮನವಿ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಪುರಸಭೆ ಕಾರ್ಯಾಲಯದಲ್ಲಿ ಭಾರತೀಯ ಜನತಾ ಪಾರ್ಟಿ ಮಾನ್ವಿ ಮಂಡಲ ವತಿಯಿಂದ ಪುರಸಭೆ ಮುಖ್ಯಾಧಿಕಾರಿ ಪರಶುರಾಮ ದೇವಮಾನೆ ರವರಿಗೆ ಬಿಜೆಪಿ ಪಕ್ಷದ ಮಾನ್ವಿ ಮಂಡಲ ಅಧ್ಯಕ್ಷರಾದ ವೀರಭದ್ರಗೌಡ ಭೋಗವತಿ ಮನವಿ ಸಲ್ಲಿಸಿ ಮಾತನಾಡಿ ಮಾನ್ವಿ ಪಟ್ಟಣದಲ್ಲಿನ ಕಾಲುವೆ ಅಕ್ಕ ಪಕ್ಕದ ಮನೆಯವರು ತಮ್ಮ ಮನೆಯ ತ್ಯಾಜ್ಯ ನೀರನ್ನು ಕಾಲುವೆಗೆ ಬಿಡುತ್ತಿರುವುದರಿಂದ ಕಾಲುವೆ ಮಲಿನವಾಗುತ್ತಿದು ಕಾಲುವೆಗೆ ನೀರು ಬಿಟ್ಟಾಗ ಕಾಲುವೆಯಲ್ಲಿನ ತ್ಯಾಜ್ಯ ಕೂಡ ನೀರಿನೊಂದಿಗೆ ಪಟ್ಟಣಕ್ಕೆ ಕುಡಿಯುವ ನೀರು ಪೂರೈಸುವ ರಬ್ಬಣಕಲ್ ಕೆರೆಗೆ ಸೇರುವುದರಿಂದ ಕೆರೆಯ ನೀರು ಕಲುಷಿತಗೊಂಡು ಜನರ ಆರೋಗ್ಯದ ಮೇಲೆ ಗಂಭಿರ ಪರಿಣಾಮವಾಗುತ್ತಿರುವುದರಿಂದ ಪುರಸಭೆ ವತಿಯಿಂದ ಕಾಲುವೆಯನ್ನು ಸ್ವಚ್ಚಗೊಳಿಸಬೇಕು. ಹಾಗೂ ಅಮೃತ-2 ಕುಡಿಯುವ ನೀರಿನ ಯೋಜನೆಯನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಬೇಕು. ಜುಮ್ಮಲದೊಡ್ಡಿ ಟ್ಯಾಂಕ್ ಬಳಕೆಗೆ ಶೀಘ್ರವೇ ಅಗತ್ಯ ಕ್ರಮ ಕೈಗೊಳ್ಳಬೇಕು. ಬೇಸಿಗೆಯಲ್ಲಿ ಪಟ್ಟಣದಲ್ಲಿ ಕುಡಿಯುವ ನೀರಿನ ಸಮರ್ಪಕ ಪೂರೈಕೆಗಾಗಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಟಿ.ಎ.ಪಿ.ಸಿ.ಎಂ.ಸಿ ಅಧ್ಯಕ್ಷರಾದ ತಿಮ್ಮರೆಡ್ಡಿಗೌಡ ಭೋಗವತಿ, ಬಿಜೆಪಿ ತಾಲೂಕ ಪ್ರಧಾನ ಕಾರ್ಯದರ್ಶಿ ಗುರುಸಿದ್ದಪ್ಪ ಕಣ್ಣೂರ್,ಜೆ. ಸುಧಾಕರ್ , ಕುಮಾರಸ್ವಾಮಿ ಮೆದಾ, ಶಿವಲಿಂಗಯ್ಯ ಸ್ವಾಮಿ , ಮಂಜುನಾಥ್ ನಾಯಕ್, ಚಂದ್ರಶೇಖರ್ ನಾಯಕ್, ತಾಯಣ್ಣ ಕಿನ್ನರಿ , ಕರಿಂಪಾಟೀಲ್, ಸುದರ್ಶನ್, ನಾಗರಾಜ್ ಭಂಡಾರಿ, ಶಿವಕುಮಾರ್, ರವಿಕುಮಾರ್ ಸಾಹುಕಾರ್, ಈರಣ್ಣ, ಸಿದ್ದಯ್ಯ ಸ್ವಾಮಿ, ರಾಜಶೇಖರ್ ಕಪಗಲ್. ಸುರೇಶ್ ಜೋತ್ಸನ್, ಮುದುಕಪ್ಪ ಜಡೆ , ಚನ್ನಬಸವ ಜಾನೇಕಲ್ , ದೊಡ್ಡಣ್ಣ ಹೂಗಾರ್ ಸೇರಿದಂತೆ ಇನ್ನಿತರರು ಇದ್ದರು.

## ಲಿಂ. ಶ್ರೀ ವಿರೂಪಾಕ್ಷ ಮಹಾ ಸ್ವಾಮಿಗಳವರ 12 ನೇ ಪುಣ್ಯಸ್ಮರಣೋತ್ಸವ

ಧೈರ್ಯದ ದಾರಿ



**ಮಾನ್ವಿ:** ತಾಲೂಕಿನ ಚೀಕಲಪರ್ವಿ ಶ್ರೀ ರುದ್ರಮುನೀಶ್ವರ ಮಠದಲ್ಲಿ ಲಿಂ. ಶ್ರೀ ವಿರೂಪಾಕ್ಷಮಹಾಸ್ವಾಮಿಗಳವರ 12 ನೇ ಪುಣ್ಯಸ್ಮರಣೋತ್ಸವ ಅಂಗವಾಗಿ ಕತೃಗದುಗೆಗೆ ಬೆಳಿಗ್ಗೆ ರುದ್ರಾಭಿಷೇಕ, ಹಾಗೂ ವಿಶೇಷ ಹೂವಿನ ಅಲಂಕಾರ ಮಾಡಲಾಯಿತು.

ಶ್ರೀಮಠದ ಅವರಣದಲ್ಲಿ ನೂತನ ಪೂಜ್ಯರ ಕಟ್ಟಡವನ್ನು ಹಾಲ್ವಿ ಶ್ರೀ ಚರಣಗೀರಿ ಸಂಸ್ಥಾನ ಮಠದ ಶ್ರೀ ಅಭಿನವ ಮಹಾಂತಸ್ವಾಮಿಗಳು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಆರ್ಶೀವಾಚನ ನೀಡಿ ಗುರುವಿನ ಸೇವೆಯಲ್ಲಿ ನಮ್ಮನ್ನು ನಾವು ತೊಡಗಿಸಿ ಕೊಂಡಾಗ ಮಾತ್ರ ಜೀವನದಲ್ಲಿ ಉತ್ತಮ ಫಲಗಳನ್ನು ಪಡೆಯುವುದಕ್ಕೆ ಸಾಧ್ಯವಾಗಲಿದೆ ಎಂದು ತಿಳಿಸಿದರು.

ಪುಣ್ಯಸ್ಮಾರಣೆ ಅಂಗವಾಗಿ ಭಕ್ತರಿಗೆ ಪ್ರಸಾದ ಸೇವೆ ನಡೆಯಿತು. ಯದ್ದಲದೊಡ್ಡಿ ಸುವರ್ಣಗಿರಿ ಸಂಸ್ಥಾನ ಮಠದ ಶ್ರೀ ಮಹಾಲಿಂಗ ಮಹಾಸ್ವಾಮಿಗಳು, ಮುನವಳ್ಳಿ ಮಠದ ಶ್ರೀ ಮುರುಗೇಂದ್ರ ಮಹಾಸ್ವಾಮಿಗಳು, ಬಳಗನೂರು ಶ್ರೀ ಮರಿಶಿವಯೋಗಿಗಳ ಮಠದ ಶ್ರೀ ಸಿದ್ದಬಸವ ಮಹಾಸ್ವಾಮಿಗಳು, ಮೈಸೂರಿನ ನಿರಂಜನದೇವರು, ಅರಳಹಳ್ಳಿ ಮಠದ ಶ್ರೀ ಶರಣಬಸವ ದೇವರು ಸೇರಿದಂತೆ ಶ್ರೀಮಠದ ಭಕ್ತರು ಭಾಗವಹಿಸಿದರು.

## ಸ್ ಟಿ ಸಮುದಾಯದಲ್ಲಿ ವಿವಿಧ ಜಾತಿಗಳ ಸೇರ್ಪಡೆ ಹೇಳಿಕೆ , ಬೋಸ್ ರಾಜ್ ವಿರುದ್ಧ ಖಂಡನೆ

ಧೈರ್ಯದ ದಾರಿ



**ಸಿರವಾರ** :ಎಸ್. ಸಿ. ಪಿ ಮತ್ತು ಟಿ ಎಸ್. ಪಿ ಯೋಜನೆಯಡಿ ದಲಿತರ ಮತ್ತು ಗಿರಿಜನರ ಅಭಿವೃದ್ಧಿಗೆ ಮೀಸಲಿಟ್ಟ ಅನುದಾನದ ಹಣವನ್ನು ದುರುಪಯೋಗ ಪಡಿಸಿಕೊಂಡು ಕಬ್ಬಲಿಗ. ಬೆಸ್ತಾ ಸೇರಿ 5 ಜಾತಿಗಳನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ಬಗ್ಗೆ ಸದನದಲ್ಲಿ ಮಾತನಾಡಿದ ಸಚಿವ ಎನ್ ಎಸ್ ಬೋಸರಾಜು ಅವರನ್ನು ಸಚಿವ ಸಂಪುಟದಿಂದ ಕೈ ಬಿಡುವಂತೆ ಒತ್ತಾಯಿಸಿ ಸಮಸ್ತ ವಾಲ್ಮೀಕಿ ನಾಯಕರು ಸಂಘಟನೆಗಳ ಒಕ್ಕೂಟದ ವತಿಯಿಂದ ಆಗ್ರಹ ಪಡಿಸಲಾಯಿತು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ವಾಲ್ಮೀಕಿ ಸಮುದಾಯದ ಮುಖಂಡರು. ದಲಿತರು. ನಾಯಕ ಸಮುದಾಯದ ಏಳಿಗೆಯನ್ನು ಸಹಿಸದ ಎನ್ ಎಸ್ ಬೋಸ್‌ರಾಜ್ ಅವರು ಬಣ್ಣ ಬಯಲಾಗಿದೆ. ಪರಿಶಿಷ್ಟ ಪಂಗಡಕ್ಕೆ ವಿವಿಧ ಜಾತಿಗಳನ್ನು ಸೇರಿಸುವ ಹೇಳಿಕೆ ಅಸಂಬದ್ಧ ವಾಗಿದೆ. ಜಾತಿ ಜಾತಿಗಳ ಮಧ್ಯೆ ವಿಷ ಬೀಜ ಬಿತ್ತುವ ಮೂಲಕ ತಮ್ಮ ರಾಜಕೀಯ ಬೇಳೆ ಬೇಯಿಸಿಕೊಳ್ಳುತ್ತಿರುವುದು ದುರಂತದ ಸಂಗತಿಯಾಗಿದೆ. ವಾಲ್ಮೀಕಿ ಸಮಾಜದ ಶಾಸಕರನ್ನು ರಬ್ಬರ್ ಸ್ಟ್ಯಾಂಪ್ ಆಗಿ 2ನೇಪುಟಕ್ಕೆ►

**ಮೊದಲನೇ ಪುಟದಿಂದ**

# ಹೋಟೆಲ್, ಕೈಗಾರಿಕೆಗೆ ಗ್ಯಾಸ್ ಟ್ರಬಲ್, ಗ್ರಾಹಕರಿಗೆ ದರ ಏರಿಕೆ ಬಿಸಿ

ಸೇರಿದಂತೆ ಇತರ ಪದಾರ್ಥಗಳ ದರ ದಿಢೀರ್ ಏರಿಕೆಯಾಗಿದೆ ಎಂದು ಗ್ರಾಹಕರು ಹೋಟೆಲ್ ಸಿಬ್ಬಂದಿ ಜೊತೆ ವಾಗ್ವಾದಕ್ಕಿಳಿದ ಘಟನೆಗಳು ನಡೆದಿವೆ. ಬೆಳಗ್ಗೆ 6 ಗಂಟೆಗೆ ತೆರೆಯುತ್ತಿದ್ದ ಹೋಟೆಲ್ ಬೆಳಿಗ್ಗೆ 10 ಗಂಟೆಗೆ ತೆರೆಯುವ ಸ್ಥಿತಿ ನಿರ್ಮಾಣವಾಗಿದೆ. ಹೀಗಾಗಿ ಅಗತ್ಯ ತಿಂಡಿ, ಕಾಫಿ, ಟೀ ಮಾರಾಟ ಮಾಡುತ್ತಿದ್ದೇವೆ ಎಂದು ಹೋಟೆಲ್ ಮಾಲೀಕರು ಸ್ಪಷ್ಟನೆ ಕೊಟ್ಟಿದ್ದಾರೆ.

ದೇಶದಲ್ಲಿ ಅಡುಗೆ ಅನಿಲ ಕೊರತೆ-ಪಶ್ಚಿಮ ಏಷ್ಯಾ ಸಂಘರ್ಷಗಳಿಂದ ಜಾಗತಿಕ ಇಂಧನ ಹರಿವಿಗೆ ಅಡ್ಡಿಯಾಗಿರುವ ನಡುವೆ ದೇಶದಲ್ಲಿ ಅಡುಗೆ ಅನಿಲ ಕೊರತೆಯ ಭೀತಿ ಎದುರಾಗಿದೆ.ಈ ನಡುವೆ ಮಧ್ಯಪ್ರದೇಶದ ವಿವಿಧೆಡೆ ದಾಳಿ ಮಾಡಿದ ರಾಜ್ಯ ಸರ್ಕಾರದ ಅಧಿಕಾರಿಗಳು ಕಾಳ ಸಂತೆಯಲ್ಲಿ ಮಾರಾಟ ಮಾಡುತ್ತಿದ್ದ 38 ಎಲ್‌ಪಿಜಿ ಸಿಲಿಂಡರ್‌ಗಳನ್ನು ವಶಪಡಿಸಿಕೊಂಡಿರುವ ಘಟನೆ ಛತ್ತಪುರ ಜಿಲ್ಲೆಯಲ್ಲಿ ನಡೆದಿದೆ

ಕೇಂದ್ರ ಸರ್ಕಾರ, ದೇಶಾದ್ಯಂತ ಹೇರಳವಾಗಿ ಪೆಟ್ರೋಲ್, ಡೀಸೆಲ್, ಸೀಮೆಎಣ್ಣೆ ಮತ್ತು ಎಲ್‌ಪಿಜಿಯನ್ನು ಒತ್ತಾಯಿಸುತ್ತಿದ್ದರೂ, ಮಧ್ಯಪ್ರದೇಶದ ಎಲ್‌ಪಿಜಿ ಔಟ್‌ಲೆಟ್‌ಗಳ ಹೊರಗೆ ಉದ್ದನೆಯ ಸಾಲುಗಳು ಎದ್ದು ಕಂಡುಬಂದಿದ್ದು ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿದ್ದ ಎಲ್ ಪಿಜಿ ಸಿಲಿಂಡರ್ ವಶಪಡಿಸಿಕೊಳ್ಳಲಾಗಿದೆ

ಉತ್ತರ ಪ್ರದೇಶದ ಬಳಿಯ ಬುಂದೇಲ್‌ಖಂಡ್ ಪ್ರದೇಶದಲ್ಲಿ ಎರಡು ದಿನಗಳ ದಾಳಿಯಲ್ಲಿ ಮಧ್ಯಪ್ರದೇಶದ ಛತ್ತಪುರ ಜಿಲ್ಲೆಯ ಅಧಿಕಾರಿಗಳು 38 ದೇಶೀಯ ಎಲ್‌ಪಿಜಿ ಸಿಲಿಂಡರ್‌ಗಳನ್ನು ವಶಪಡಿಸಿಕೊಂಡಿದ್ದಾರೆ

ಪಶ್ಚಿಮ ಏಷ್ಯಾ ಸಂಘರ್ಷಗಳಿಗೆ ಸಂಬಂಧಿಸಿದ ಅಡುಗೆ ಅನಿಲ ಕೊರತೆಯು ಜಾಗತಿಕ ಪೂರೈಕೆಗೆ ಅಡ್ಡಿಪಡಿಸಿದೆ. ಇದರಿಂದಾಗಿ ರಾಜ್ಯಾದ್ಯಂತ ಎಲ್‌ಪಿಜಿ ಏಜೆನ್ಸಿಗಳಲ್ಲಿ ದೀರ್ಘ ಸರತಿ ಸಾಲುಗಳು ಕಂಡುಬಂದವು. ದೇಶಾದ್ಯಂತ ಸಾಕಷ್ಟು ಪೆಟ್ರೋಲ್, ಡೀಸೆಲ್, ಸೀಮೆಎಣ್ಣೆ ಮತ್ತು ಎಲ್‌ಪಿಜಿ ದಾಸ್ತಾನುಗಳ ಬಗ್ಗೆ ಕೇಂದ್ರ ಸರ್ಕಾರದ ಭರವಸೆಗಳ ಹೊರತಾಗಿಯೂ, ಜಿಲ್ಲಾಡಳಿತ ಕಪ್ಪು ಮಾರುಕಟ್ಟೆ, ಅಕ್ರಮ ಸಂಗ್ರಹಣೆ ಮತ್ತು ಗೃಹಬಳಕೆಯ ಸಿಲಿಂಡರ್‌ಗಳ ದುರುಪಯೋಗದ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಳ್ಳಲು ಆದೇಶಿಸಿದೆ.

ನೌಗಾಂಗ್ ಪ್ರದೇಶದ ಬಿಲ್ಹಾರಿ ಗ್ರಾಮದಲ್ಲಿರುವ ನೀರಿನ ಸ್ಥಾವರದ ಮೇಲೆ ಕಂದಾಯ ಮತ್ತು ಆಹಾರ ಇಲಾಖೆಯ ಜಂಟಿ ತಂಡ ದಾಳಿ ನಡೆಸಿ, ವಾಣಿಜ್ಯ ವ್ಯಾಪಾರಕ್ಕಾಗಿ ಅಕ್ರಮವಾಗಿ ಸಂಗ್ರಹಿಸಲಾದ 13 ಖಾಲಿ ಎಲ್‌ಪಿಜಿ ಸಿಲಿಂಡರ್‌ಗಳನ್ನು ವಶಪಡಿಸಿಕೊಂಡಿದೆ. ಜಿಲ್ಲಾ ಉಸ್ತುವಾರಿ ಜಿಲ್ಲಾಧಿಕಾರಿ ನಮ ಶಿವಯ್ ಅರ್ಜರಿಯಾ ಅವರ ನಿರ್ದೇಶನದ ಮೇರೆಗೆ ಉಪವಿಭಾಗೀಯ ಮ್ಯಾಜಿಸ್ಟ್ರೇಟ್ ಜಿ.ಎಸ್. ಪಟೇಲ್ ನೇತೃತ್ವದಲ್ಲಿ, ಹೆಚ್ಚುತ್ತಿರುವ ದೂರುಗಳ ಹಿನ್ನೆಲೆಯಲ್ಲಿ ಕಾರ್ಯಾಚರಣೆ ನಡೆಸಲಾಗಿದೆ.

10 ದಿನಗಳಲ್ಲಿ ಪರಿಹಾರ:ಕೆಎಚ್‌ಎಂಹೋಟೆಲ್‌ಗಳಿಗೆ ವಾಣಿಜ್ಯ ಸಿಲಿಂಡರ್ ಗಳ ಕೊರತೆಯು ಒಂದು ವಾರ ಇಲ್ಲವೇ 10 ದಿನಗಳವರೆಗೆ ಉಂಟಾಗಬಹುದು. ಅಲ್ಲಿವರೆಗೂ ಹೋಟೆಲ್‌ಗಳು ಸಹಿಸಿಕೊಳ್ಳಬೇಕು ಎಂದು ಆಹಾರ ಮತ್ತು ನಾಗರೀಕ ಪೂರೈಕೆ ಸಚಿವ ಮುನಿಯಪ್ಪ ಮೇಲ್ಮನೆಯಲ್ಲಿ ಇಂದು ತಿಳಿಸಿದ್ದಾರೆ.

ರಾಜ್ಯದಲ್ಲಿ ಸಿಲಿಂಡರ್ ಗಳ ಸಮಸ್ಯೆ ಬಗ್ಗೆ ಕಾಂಗ್ರೆಸ್ ಸದಸ್ಯರಾದ ಐವಾನ್ ಡಿಸೋಜ ಮತ್ತು ನಾಗರಾಜ್ ಯಾದವ್ ಅವರು ಶೂನ್ಯ ವೇಳೆ ಮಾಡಿದ ಪ್ರಸ್ತಾಪಕ್ಕೆ ಸಚಿವರು ಉತ್ತರ ನೀಡಿದರು.

ಆಟೋ, ಹೋಟೆಲ್‌ಗಳಿಗೆ ಸಿಲಿಂಡರ್ ದೊರೆಯುತ್ತಿಲ್ಲ. ಗ್ಯಾಸ್ ಕಾಳಸಂತೆಯಲ್ಲಿ ಮಾರಾಟವಾಗುತ್ತಿದೆ. ಹೋಟೆಲ್‌ನಲ್ಲಿ ತಿಂಡಿ, ಊಟ ಸಮಸ್ಯೆ ಉಂಟಾಗಿದೆ. ಗ್ಯಾಸ್ ರೇಟ್ ಏರಿಕೆ ಬಗ್ಗೆ ಸೋಶಿಯಲ್ ಮೀಡಿಯಾದಲ್ಲಿ ರಾಜ್ಯ ಸರ್ಕಾರದ ವಿರುದ್ಧ ಸುದ್ದಿಯಾಗುತ್ತಿದೆ. ಈ ಬಗ್ಗೆ ತನಿಖೆ ಆಗಬೇಕು ಎಂದು ಸದಸ್ಯರು ಸದನದ ಗಮನ ಸೆಳೆದರು.

ವಿಶ್ವವಿದ್ಯಾಲಯಗಳಲ್ಲಿ ಗ್ಯಾಸ್‌ನಿಂದ ಊಟ ಕೊಡಲು ಆಗುತ್ತಿಲ್ಲ, ಹೀಗಾಗಿ- ಸಿಲಯ ಸಮಸ್ಯೆಗೆ ಪರಿಹಾರ ದೊರೆಯುವವರೆಗೆ ವಿವಿಗಳಿಗೆ ರಜೆ ಕೊಡಲು ಸರ್ಕಾರ ಕ್ರಮ ತೆಗೆದುಕೊಳ್ಳಬೇಕು. ಇಂದಿರಾ ಕ್ಯಾಂಟೀನ್, ಆಸ್ಪತ್ರೆಗಳಲ್ಲಿ ಸಮಸ್ಯೆ ಆಗಿದೆ. ಮದುವೆಗಳು ನಿಂತಿವೆ. ದೇವಸ್ಥಾನದಲ್ಲಿ ಪ್ರಸಾದಕ್ಕೂ ತೊಂದರೆಯಾಗಿದೆ,ರಾಜ್ಯ ಸರ್ಕಾರ ಸಿಲ ಸಮಸ್ಯೆ ನಿವಾರಣೆಗಸ ಮುಂದಾಗಬೇಕು ಎಂದು ಒತ್ತಾಯಿಸಿದರು.

ಇದಕ್ಕೆ ಸಚಿವ ಮುನಿಯಪ್ಪ ಉತ್ತರ ನೀಡಿ, ಇಂದು ಕೂಡ ಆಯಿಲ್ ಕಂಪನಿ ಜೊತೆ ಮಾತುಕತೆ ನಡೆಸಿದ್ದೇನೆ. ಆಸ್ಪತ್ರೆ, ಹಾಸ್ಟೆಲ್, ವಸತಿ ನಿಲಯಕ್ಕೆ ಕಮರ್ಷಿಯಲ್ ಸಿಲಿಂಡರ್ ಕೊಡುತ್ತೇವೆ, ತಕ್ಷಣಕ್ಕೆ ಸಮಸ್ಯೆ ಆಗಿದೆ. ಒಂದು ವಾರದಲ್ಲಿ ಸಮಸ್ಯೆ ಪರಿಹಾರ ಆಗಲಿದೆ. ಹೋಟೆಲ್ ಅವರಿಗೆ ಎಲೆಕ್ಟ್ರಿಕ್ ಸ್ಟೌವ್ ಬಳಕೆ ಮಾಡಿ ಎಂದು ಮನವಿ ಮಾಡಿದ್ದೇವೆ. ಹೋಟೆಲ್ ಅವರು ಒಂದು ವಾರ ಸಹಿಸಿಕೊಳ್ಳಬೇಕು ಎಂದು ಕರೆ ನೀಡಿದ್ದಾರೆ.

ಈಗಾಗಲೇ ಎರಡು ಹಡಗುಗಳು ದೇಶಕ್ಕೆ ಬಂದಿದೆ. ಮತ್ತೆ 10-12 ಹಡಗು ಬರುವ ಸಾಧ್ಯತೆ ಇದೆ. ಆಗ ಸಮಸ್ಯೆ ಸರಿ ಆಗುತ್ತದೆ. ಕಾಳಸಂತೆ ಮಾರಾಟದ ಮೇಲೆ ನಿಗಾ ಇಡಲು ಪೊಲೀಸ್ ಇಲಾಖೆಗೆ ಸೂಚನೆ ಕೊಡಲಾಗಿದೆ. ಡಿಜಿ ಅವರಿಗೆ ಸೂಚನೆ ಕೊಡಲಾಗಿದೆ. ಕಮರ್ಷಿಯಲ್ ಗ್ಯಾಸ್‌ಗೆ ಒಂದು ವಾರ ಅಥವಾ 10 ದಿನ ಸಮಸ್ಯೆ ಆಗುತ್ತದೆ. ಸ್ಟಾಕ್ ಇಲ್ಲ ಸಹಿಸಿಕೊಳ್ಳಬೇಕು. ಆಟೋಗಳಿಗೆ ಗ್ಯಾಸ್ ಅವಕಾಶ ಮಾಡಿಕೊಡಲು ಸೂಚನೆ ಕೊಡಲಾಗಿದೆ ಎಂದು ತಿಳಿಸಿದರು.

# ಸ್ ಟಿ ಸಮುದಾಯದಲ್ಲಿ ವಿವಿಧ ಜಾತಿಗಳ ಸೇರ್ಪಡೆ ಹೇಳಿಕೆ , ಬೋಸ್ ರಾಜ್ ವಿರುದ್ಧ ಖಂಡನೆ

ಬಳಸಿಕೊಳ್ಳುವ ಮೂಲಕ ಸಮಾಜಕ್ಕೆ ಅನ್ಯಾಯ ಮಾಡಲಾಗುತ್ತಿದೆ. ಕೊಡಗು ಉಸ್ತುವಾರಿ ಸಚಿವರಾಗಿದ್ದರು ರಾಯಚೂರಿನ ಎಲ್ಲಾ ಅಭಿವೃದ್ಧಿ ಕಾರ್ಯಕ್ರಮಗಳಲ್ಲಿ ವಾಲ್ಮೀಕಿ ಸಮಾಜದ ಶಾಸಕರನ್ನು ಬದಿಗೊತ್ತಿ ದುರಹಂಕಾರ ಮೆರೆಯುತ್ತಿರುವ ಬೋಸರಾಜು ಅವರನ್ನು ಸಂಪುಟದಿಂದ ಕೈ ಬಿಡಬೇಕು ಇಲ್ಲ ಮುಂದಿನ ದಿನಗಳಲ್ಲಿ ಸಮಾಜದ ವತಿಯಿಂದ ಉಗ್ರ ಹೋರಾಟ ಮಾಡಲಿದ್ದೇವೆ ಎಂದರು. ಈ ಸಂದರ್ಭದಲ್ಲಿ ಸಮುದಾಯದ ಮುಖಂಡರಾದ ಕೃಷ್ಣ ನಾಯಕ್.ಗಡ್ಲಾ ಅಂಬರೀಶ್ ನಾಯಕ್.ಸೂರ್ಯದುರ್ಗಣ್ಣ ನಾಯಕ್.ಲಿಂಗಯ್ಯ ನಾಯಕ್ ಸೈದಾಪುರ್. ವೆಂಕಟೇಶ್ ತೊರೆ ಎಲ್ಲಪ್ಪ ನಾಯಕ್ ಗಡ್ಲ ಚನ್ನಬಸವ ಮಲ್ಲಿಕಾರ್ಜುನ್ ಶಿಖಂಡಿ ಅಂಬು ನಾಯಕ್ ಹನುಮೇಶ್ ನಾಯಕ್ ಬಾಂಬೆ. ನಾಗೇಶ್ ನಾಯಕ್ ನವಲಕಲ್ ದೇವಪ್ಪ ಮಂಜುನಾಥ್ ಆನಂದ್ ಪಟಗಿ ಹನುಮಂತ ರಾಯಣ್ಣ ಬಳ್ಳಾಪುರ ರವಿ ಆಲ್ಕೋಡ್ ಶಿವರಾಜ್ ಮರಾಠ ಟಿ ರಮೇಶ್ ಸೇರಿದಂತೆ ಸಮಾಜದ ಮುಖಂಡರು ಇದ್ದರು

### ವಿಧಾನ ಸೌಧದಲ್ಲಿ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರಿಗೆ ದೂರು

# ನೀರಮಾನ್ವಿ ಗಣಿ ಹಗರಣದ ಬಗ್ಗೆ ಉನ್ನತ ಮಟ್ಟದ ತನಿಖೆಗೆ ಗುರುರಾಜ ನಾಗಲಾಪುರ ಆಗ್ರಹ.

ಧೈರ್ಯದ ದಾರಿ

**ಬೆಂಗಳೂರು/ಮಾನ್ವಿ:**ರಾಯಚೂರು ಜಿಲ್ಲೆಯ ಮಾನ್ವಿ ತಾಲೂಕಿನ ನೀರಮಾನ್ವಿ ಗ್ರಾಮದಲ್ಲಿ ನಡೆದಿದೆ ಎನ್ನಲಾದ ಕೋಟ್ಯಂತರ ರೂಪಾಯಿ ಗಣಿ ದಂಡ ಅಕ್ರಮ ಹಾಗೂ ಸರ್ಕಾರಿ ಜಮೀನು ಒತ್ತುವರಿ ಪ್ರಕರಣಕ್ಕೆ ಸಂಬಂಧಿಸಿದಂತೆ, ಸಮಾಜ ಸೇವಕ ಗುರುರಾಜ ನಾಗಲಾಪುರ ಅವರು ಇಂದು ಬೆಂಗಳೂರಿನ ವಿಧಾನ ಸೌಧದಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರಾದ ಮಾನ್ಯ ಶ್ರೀ ಛಲವಾದಿ ನಾರಾಯಣಸ್ವಾಮಿ ಅವರನ್ನು ಭೇಟಿ ಮಾಡಿ ಅಧಿಕೃತವಾಗಿ ದೂರು ಸಲ್ಲಿಸಿದರು.

**ಉಪವಾಸ ಸತ್ಯಾಗ್ರಹಕ್ಕೂ ಬೆಲೆ ನೀಡದ ಅಧಿಕಾರಿಗಳು:** "ಮಾನ್ವಿ ಪಟ್ಟಣದಲ್ಲಿ ಎರಡು ದಿನಗಳ ಕಾಲ ಉಪವಾಸ ಸತ್ಯಾಗ್ರಹ ನಡೆಸಿದ ಸಂದರ್ಭದಲ್ಲಿ ಅಧಿಕಾರಿಗಳು ಗಣಿಗಾರಿಕೆ ಸ್ಥಗಿತಗೊಳಿಸಿ ದಂಡ ವಸೂಲಿ ಮಾಡುವುದಾಗಿ ಲಿಖಿತ ಭರವಸೆ ನೀಡಿದ್ದರು. ಆದರೆ ಆ ಭರವಸೆ ನೀಡಿ ಹಲವು ತಿಂಗಳು ಕಳೆದರೂ ಇಂದಿನವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಜಿಲ್ಲಾಡಳಿತದ ಅಧಿಕಾರಿಗಳು ಅಕ್ರಮ ಕಂಪನಿಯೊಂದಿಗೆ ಶಾಮೀಲಾಗಿರುವುದು ಸ್ಪಷ್ಟವಾಗಿದೆ" ಎಂದು ಗುರುರಾಜ ನಾಗಲಾಪುರ ಅವರು ವಿರೋಧ ಪಕ್ಷದ ನಾಯಕರ ಗಮನಕ್ಕೆ ತಂದರು.

– **ದಂಡದ ಮೊತ್ತದಲ್ಲಿ ಅಕ್ರಮ ಕಡಿತ:** ಐಎಎಸ್ ಅಧಿಕಾರಿ ಗಜಾನನ ಬಾಳೆ ಅವರ ತಂಡ ವಿಧಿಸಿದ್ದ 1.88 ಕೋಟಿ ದಂಡವನ್ನು ನಿಯಮಬಾಹಿರವಾಗಿ 1.06 ಕೋಟಿಗೆ ಇಳಿಸಿ ಸರ್ಕಾರದ ಬೊಕ್ಕಸಕ್ಕೆ 82 ಲಕ್ಷ ನಷ್ಟ ಉಂಟುಮಾಡಿರುವ ಹಿರಿಯ ಭೂವಿಜ್ಞಾನಿ ಮುತ್ತಪ್ಪ ಹಾಗೂ ತಂಡದ ವಿರುದ್ಧ ಕ್ರಮಕ್ಕೆ ಆಗ್ರಹ.

– ಒತ್ತುವರಿ ಮತ್ತು ಅಕ್ರಮ M-Sand: ಮಂಜೂರಾದ 5 ಎಕರೆ ಬದಲು 6 ಎಕರೆ 14 ಗುಂಟೆ ಸರ್ಕಾರಿ/ಅರಣ್ಯ ಭೂಮಿ ಒತ್ತುವರಿ ಹಾಗೂ ಯಾವುದೇ ಪರವಾನಗಿ ಇಲ್ಲದ ಅಕ್ರಮ



M-Sand ಘಟಕದ ಕಾರ್ಯಾಚರಣೆ ತಡೆಯುವಂತೆ ವಿನಂತಿ.

– **ಸದನದಲ್ಲಿ ಪ್ರಸ್ತಾಪಿಸಲು ಮನವಿ:** ಈ ಗಂಭೀರ ಭ್ರಷ್ಟಾಚಾರದ ಕುರಿತು ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರಾದ ಛಲವಾದಿ ನಾರಾಯಣಸ್ವಾಮಿ ಅವರು ಸದನದಲ್ಲಿ ಧ್ವನಿ ಎತ್ತಿ, ತಪ್ಪಿತಸ್ಥ ಅಧಿಕಾರಿಗಳನ್ನು ಅಮಾನತುಗೊಳಿಸಿ ಉನ್ನತ ಮಟ್ಟದ ತನಿಖೆ ನಡೆಸುವಂತೆ ಸರ್ಕಾರವನ್ನು ಒತ್ತಾಯಿಸಬೇಕೆಂದು ಕೋರಲಾಯಿತು.

ಮನವಿ ಸ್ವೀಕರಿಸಿದ ವಿರೋಧ ಪಕ್ಷದ ನಾಯಕರು, ಈ ಪ್ರಕರಣದ ಬಗ್ಗೆ ಸರ್ಕಾರದ ಗಮನ ಸೆಳೆದು ಸೂಕ್ತ ಕ್ರಮ ಕೈಗೊಳ್ಳುವಂತೆ ಹಾಗೂ ಪೀಡಿತ ಗ್ರಾಮಸ್ಥರಿಗೆ ನ್ಯಾಯ ಒದಗಿಸುವಂತೆ ಒತ್ತಾಯಿಸುವುದಾಗಿ ಭರವಸೆ ನೀಡಿದರು.

# ಸಚಿವರಾದ ಎನ್.ಎಸ್.ಭೋಸರಾಜು ರಾಯಚೂರು ಜಿಲ್ಲಾ ಪ್ರವಾಸ

**ರಾಯಚೂರು ಮಾ,13–**ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಕರ್ನಾಟಕ ವಿಧಾನ ಪರಿಷತ್ತು ಸಭಾ ನಾಯಕರಾದ ಎನ್.ಎಸ್.ಭೋಸರಾಜು ಅವರು ಮಾರ್ಚ್ 14, 15ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಮಾರ್ಚ್ 14ರ ಬೆಳಿಗ್ಗೆ 8ಗಂಟೆಗೆ ರಾಯಚೂರಿನಿಂದ ರಸ್ತೆ ಮಾರ್ಗವಾಗಿ ನಿರ್ಗಮಿಸಿ, ಬೆಳಿಗ್ಗೆ 9ಗಂಟೆಗೆ ತೆಲಂಗಾಣ ರಾಜ್ಯದ ಗದ್ವಾಲ್ ಕ್ಷೇತ್ರದ ಶಾಸಕರಾದ ಬಂಡ್ಲಾ ಕೃಷ್ಣಮೋಹನ್ ರೆಡ್ಡಿ ಅವರ ಕುಟುಂಬದ ವಿವಾಹ ಸಮಾರಂಭದಲ್ಲಿ ಭಾಗಿಯಾಗುವರು.

ಬೆಳಿಗ್ಗೆ 10ಗಂಟೆಗೆ ಗದ್ವಾಲ್‌ನಿಂದ ರಸ್ತೆ ಮಾರ್ಗವಾಗಿ ನಿರ್ಗಮಿಸಿ, 11ಕ್ಕೆ ರಾಯಚೂರಿಗೆ ಆಗಮಿಸಿಲಿದ್ದಾರೆ. 11.30ಕ್ಕೆ ರಾಯಚೂರಿನಿಂದ ನಿರ್ಗಮಿಸಿ, 12ಕ್ಕೆ ಜಿಲ್ಲೆಯ ಮಾನವಿಗೆ ಪ್ರಯಾಣ ಬೆಳೆಸಿ, ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗಿಯಾಗುವರು.

ಸಂಜೆ 4ಗಂಟೆಗೆ ಮಾನವಿಯಿಂದ ನಿರ್ಗಮಿಸಿ, ಸಂಜೆ 5ಗಂಟೆಗೆ ರಾಯಚೂರಿನಲ್ಲಿ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗಿಯಾಗುವರು.

ಮಾರ್ಚ್ 15ರ ಮಧ್ಯಾಹ್ನ 3ಗಂಟೆಗೆ ರಾಯಚೂರಿನಿಂದ ನಿರ್ಗಮಿಸಿ, ಸಂಜೆ 4ಕ್ಕೆ ಮಾನವಿಗೆ ಆಗಮಿಸಿ ಸಂಜೆ 6ಗಂಟೆಗೆ ಮಾನವಿ ಪಟ್ಟಣದ ಈದ್ಗಾ ಶಾದಿಮಹಲ್‌ನಲ್ಲಿ ರಂಜಾನ್ ಹಬ್ಬದ ಪ್ರಯುಕ್ತ ಏರ್ಪಸಿರುವ ಇಫ್ತಿಯಾರ್ ಕೂಟದಲ್ಲಿ ಭಾಗವಹಿಸುವರು.

ರಾತ್ರಿ 8ಗಂಟೆಗೆ ರಾಯಚೂರಿಗೆ ಆಗಮಿಸಿ, ಬಳಿಕ ರೈಲ್ವೆ ಮಾರ್ಗವಾಗಿ ರಾಯಚೂರಿನಿಂದ ಕೇಂದ್ರ ಸ್ಥಾನ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳಾದ ವೀರಭದ್ರ ಹಂಚಿನಾಳ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಗ್ನಿವೀರ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ರಾಯಚೂರು ಜಿಲ್ಲೆಯ ಯುವಕರಿಗೆ ಸುವರ್ಣಾವಕಾಶ

**ರಾಯಚೂರು ಮಾ,13–** ಭಾರತೀಯ ಸೇನೆಯಲ್ಲಿನ ಅಗ್ನಿವೀರ್ ಸೇರಿದಂತೆ ವಿವಿಧ ಹುದ್ದೆಗಳನ್ನು ಸೇರಲು ಆಸಕ್ತಿಯಿರುವ ರಾಯಚೂರು ಸೇರಿದಂತೆ ಕೊಪ್ಪಳ, ಯಾದಗಿರಿ, ಕಲಬುರಗಿ, ಬಳ್ಳಾರಿ, ವಿಜಯನಗರ ಹಾಗೂ ಬೀದರ ಜಿಲ್ಲೆಗಳ ಯುವಕರಿಗೆ ಅರ್ಜಿ ಸಲ್ಲಿಸಲು ಏಪ್ರೀಲ್ 01 ರವರೆಗೆ ಅವಕಾಶ ಕಲ್ಪಿಸಲಾಗಿದೆ.

ಆಸಕ್ತ ಯುವಕರು ಸೇನೆಯ ಅಧಿಕೃತ ವೆಬ್‌ಸೈಟ್ www.joinindianarmy.nic.in ಗೆ ಭೇಟಿ ನೀಡಿ ಅಲ್ಲಿ ಅಗ್ನಿಪಥ್ ಟ್ಯಾಬ್ ಕ್ಲಿಕ್ ಮಾಡಿ, ಆಧಾರ್ ಅಥವಾ 10ನೇ ತರಗತಿ ಸರ್ಟಿಫಿಕೇಟ್ ಬಳಸಿ ನೋಂದಣಿ ಮಾಡಿಕೊಳ್ಳಬಹುದಾಗಿದೆ.

ಅರ್ಜಿ ಶುಲ್ಕ 250 ರೂ. ನಿಗದಿಪಡಿಸಲಾಗಿದ್ದು, ಅಗ್ನಿವೀರ್ ಜನರಲ್ ಡ್ಯೂಟಿ ಹುದ್ದೆಗೆ ಅರ್ಜಿ ಸಲ್ಲಿಸಲು 10ನೇ ತರಗತಿಯಲ್ಲಿ ಕನಿಷ್ಠ ಶೇ.45 ರಷ್ಟು ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು. ಅಗ್ನಿವೀರ್ ಟೆಕ್ನಿಕಲ್‌ಗೆ ಅರ್ಜಿ ಸಲ್ಲಿಸಲು ಪಿಯುಸಿ ವಿಜ್ಞಾನ ವಿಭಾಗದಲ್ಲಿ ಉತ್ತೀರ್ಣ ಅಥವಾ 10ನೇ ತರಗತಿಯ ಜೊತೆಗೆ ಐಟಿಐ ಮುಗಿಸಿರಬೇಕು.

ಅಗ್ನಿವೀರ್ ಕ್ಲರ್ಕ್ ಹಾಗೂ ಸ್ಟೋರ್ ಕೀಪರ್ ಹುದ್ದೆಗಳಿಗೆ ಯಾವುದೇ ವಿಭಾಗದ ಪಿಯುಸಿಯಲ್ಲಿ ಕನಿಷ್ಠ ಶೇ.60 ಅಂಕಗಳನ್ನು ಪಡೆದಿರಬೇಕು. ಇಂಗ್ಲಿಷ್ ಮತ್ತು ಗಣಿತ ವಿಷಯ ಕಡ್ಡಾಯವಾಗಿರುತ್ತದೆ.

ಅಗ್ನಿವೀರ್ ಟ್ರೇಡ್ಸ್‌ಮನ್ ಹುದ್ದೆಗೆ 8 ನೇ ಅಥವಾ 10ನೇ ತರಗತಿ ಉತ್ತೀರ್ಣರಾಗಿರಬೇಕು. ಎರಡು ಹಂತಗಳಲ್ಲಿ ಸಾಮರ್ಥ್ಯದ ಪರೀಕ್ಷೆ ನಡೆಯಲ್ಲಿದ್ದು ಮೊದಲಿಗೆ ಕಂಪ್ಯೂಟರ್ ಆಧಾರಿತ ಲಿಖಿತ ಪರೀಕ್ಷೆ ಇರುತ್ತದೆ. ಇದರಲ್ಲಿ ಉತ್ತೀರ್ಣರಾದವರಿಗೆ ಮುಂದಿನ ಹಂತಕ್ಕೆ ಅವಕಾಶವಿರುತ್ತದೆ. ಎರಡನೇ ಹಂತದಲ್ಲಿ ನೇಮಕಾತಿ ರ‍್ಯಾಲಿಯಲ್ಲಿ ದೈಹಿಕ ಪರೀಕ್ಷೆ ಇರುತ್ತದೆ ಎಂದು ಭಾರತೀಯ ಸೇನೆಯ ಬೆಂಗಳೂರು ಕೇಂದ್ರ ಕಚೇರಿಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾರ್ಚ್ 17ರಂದು ವಿವಿಧ ಜಯಂತಿಗಳ ಪೂರ್ವಭಾವಿ ಸಭೆ

**ರಾಯಚೂರು ಮಾ,13–** ಜಿಲ್ಲೆಯಲ್ಲಿ ಜಿಲ್ಲಾಡಳಿತದ ವತಿಯಿಂದ ಮಾರ್ಚ್ 23ರಂದು ದೇವರ ದಾಸಿಮಯ್ಯ ಜಯಂತಿ ಹಾಗೂ ಮಾರ್ಚ್ 31ರಂದು ಭಗವಾನ್ ಮಹಾವೀರ್ ಜಯಂತಿ ನಡೆಯಲಿವೆ.

ಈ ಜಯಂತಿಗಳ ಅಂಗವಾಗಿ ಮಾರ್ಚ್ 17ರ ಬೆಳಿಗ್ಗೆ 11ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದ್ದು, ವಿವಿಧ ಸಮಾಜದ ಮುಖಂಡರು, ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿ ಸೂಕ್ತ ಸಲಹೆ ಸೂಚನೆ ನೀಡಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಿಯು ಪರೀಕ್ಷೆ ರಾಜ್ಯಶಾಸ್ತ್ರ ವಿಷಯಕ್ಕೆ 972 ವಿದ್ಯಾರ್ಥಿಗಳು ಗೈರು

**ರಾಯಚೂರು ಮಾ,13–** ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯಿಂದ 2026ರ ಮಾರ್ಚ್ 13ರ ಶುಕ್ರವಾರ ನಡೆದ ರಾಜ್ಯಶಾಸ್ತ್ರ ವಿಷಯದಲ್ಲಿ 972 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದಾರೆ. ಜಿಲ್ಲೆಯ 43 ಪರೀಕ್ಷೆ ಕೇಂದ್ರಗಳಲ್ಲಿ ನಡೆದ ರಾಜ್ಯಶಾಸ್ತ್ರ ವಿಷಯದಲ್ಲಿ ಪರೀಕ್ಷೆಗೆ 10,349 ವಿದ್ಯಾರ್ಥಿಗಳು ನೋಂದಣಿಯಾಗಿದ್ದ ಪೈಕಿ 9,371 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ, 972 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದಾರೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾರ್ಚ್ 17ರಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ಸಂದರ್ಶನ

**ರಾಯಚೂರು ಮಾ,13–**ಇಲ್ಲಿನ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಮಾರ್ಚ್ 17ರ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 02 ಗಂಟೆವರೆಗೆ ನೇರ ಸಂದರ್ಶನ ಆಯೋಜಿಸಲಾಗಿದೆ. ಈ ವೇಳೆ ಎರಡು ಕಂಪನಿಗಳು ಭಾಗವಹಿಸಿ ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.

ಅರ್ಹತೆಗಳು: ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಆಸಕ್ತ 18 ರಿಂದ 30 ವರ್ಷಗಳ ವರೆಗಿನ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ. ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ತಮ್ಮ ಬಯೋಡೆಟಾ, ಆಧಾರ್ ಕಾರ್ಡ್ ಪ್ರತಿ, ಭಾವಚಿತ್ರಗನ್ನು ಸಲ್ಲಿಸಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬಾಲಾಜಿ ಕಾಂಪ್ಲೆಕ್ಸ್, ನೆಲ ಮಹಡಿ, ಗೂಡ್ ಶೆಡ್ ರಸ್ತೆ, ಸ್ಟೇಷನ್ ಏರಿಯಾ, ರಾಯಚೂರು ಹಾಗೂ ದೂರವಾಣಿ ಸಂಖ್ಯೆ 08532-231684, 9916931616, 9008211750ಗೆ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ್ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೈತ ಮಕ್ಕಳಿಂದ ತೋಟಗಾರಿಕೆ ತರಬೇತಿಗೆ ಅರ್ಜಿ ಆಹ್ವಾನ

**ರಾಯಚೂರು ಮಾ,13–**ಇಲ್ಲಿನ ತೋಟಗಾರಿಕೆ ಇಲಾಖೆಯಿಂದ 2026-27ನೇ ಸಾಲಿಗೆ ಜಿಲ್ಲೆಯ ಆಸಕ್ತಿಯುಳ್ಳ ಅರ್ಹ ರೈತ ಮಕ್ಕಳಿಗೆ ಕೊಪ್ಪಳ ತಾಲ್ಲೂಕಿನ ಮುನಿರಾಬಾದ ತೋಟಗಾರಿಕಾ ತರಬೇತಿ ಕೇಂದ್ರದಲ್ಲಿ 10 ತಿಂಗಳ ತೋಟಗಾರಿಕೆ ತರಬೇತಿ ನಡೆಯಲಿದ್ದು, ಆಸಕ್ತರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಅಂಗವಿಕಲರಿಗೆ ಕನಿಷ್ಟ 18 ವರ್ಷ ಮತ್ತು ಗರಿಷ್ಟ 33 ವರ್ಷ, ಮಾಜಿ ಸೈನಿಕರಿಗೆ 33 ರಿಂದ ಗರಿಷ್ಟ 65 ವರ್ಷ ಹಾಗೂ ಇತರರಿಗೆ ಕನಿಷ್ಟ 18 ವರ್ಷ ಮತ್ತು ಗರಿಷ್ಟ 30 ವರ್ಷದ ಅಭ್ಯರ್ಥಿಗಳು ಕನ್ನಡ ವಿಷಯದೊಂದಿಗೆ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು. ತರಬೇತಿ ಪ್ರವೇಶ ಬಯಸುವ ಅಭ್ಯರ್ಥಿಯ ತಂದೆ / ತಾಯಿ / ಪೋಷಕರು ಕಡ್ಡಾಯವಾಗಿ ಜಮೀನು ಹೊಂದಿರಬೇಕು. ಹಾಗೂ ಸ್ವಂತ ಸಾಗುವಳಿ ಮಾಡುತ್ತಿರಬೇಕು. ಮಾಜಿ ಸೈನಿಕರು ಪ್ರವೇಶ ಪಡೆಯಲು ಇಚ್ಚಿಸಿದಲ್ಲಿ ಮೇಲೆ ತಿಳಿಸಿದ ವಿವರಗಳೊಂದಿಗೆ ಇತರೆ ದಾಖಲಾತಿಗಳಾದ Discharge book copy, Personal Pension Order copy, Ex. Serviceman ID card copy ಇತ್ಯಾದಿಗಳನ್ನು ಸಲ್ಲಿಸಬೇಕು.

ಅರ್ಜಿಗಳನ್ನು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರುರಾಜ್ಯವಲಯ, ರಾಯಚೂರುಕಛೇರಿ ಅಥವಾ ಇಲಾಖೆಯ ವೆಬ್ ಸೈಟ್ https://horticulturedir.karnataka.gov.in ಮೂಲಕ ಪಡೆದು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಏಪ್ರೀಲ್ 15ರ ಸಂಜೆ 05.30ರೊಳಗಾಗಿ ಈ ಕಚೇರಿಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ವಿವರಗಳಿಗೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ, ರಾಜ್ಯ ವಲಯ, ರಾಯಚೂರು ಅಥವಾ ದೂರವಾಣಿ ಸಂಖ್ಯೆ: 9844621424ಗೆ ಕಚೇರಿಯ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# "ಹಸಿವು"

**ಮಾ**ನವನ ಜೀವನದಲ್ಲಿ ಆಹಾರವು ಮೂಲಭೂತ ಅಗತ್ಯಗಳಲ್ಲಿ ಅತ್ಯಂತ ಪ್ರಮುಖವಾದುದು. ಆಹಾರವಿಲ್ಲದೆ ಜೀವನ ಸಾಧ್ಯವಿಲ್ಲ. ಆದರೆ "ಹಸಿವು" ಎಂಬ ಅನುಭವವು ಎಲ್ಲರಿಗೂ ಒಂದೇ ರೀತಿಯಲ್ಲಿ ಇರುವುದಿಲ್ಲ. ಸಮಾಜದಲ್ಲಿ ಆರ್ಥಿಕ ಅಸಮಾನತೆ ಇರುವುದರಿಂದ ಬಡವರಿಗೂ ಶ್ರೀಮಂತರಿಗೂ ಹಸಿವಿನ ಅನುಭವ, ಅದರ ಅರ್ಥ, ಅದರ ಪರಿಣಾಮಗಳು ಎಲ್ಲವೂ ಬಹಳ ಭಿನ್ನವಾಗಿವೆ. ಒಬ್ಬರಿಗೆ ಹಸಿವು ಎಂದರೆ ಜೀವ ಉಳಿಸಲು ಬೇಕಾದ ಆಹಾರ ಸಿಗದೆ ಹೊಟ್ಟೆ ಖಾಲಿಯಾಗಿರುವ ದುಸ್ಥಿತಿ ಆಗಿದ್ದರೆ, ಮತ್ತೊಬ್ಬರಿಗೆ ಅದು ಸಮಯಕ್ಕೆ ಸರಿಯಾಗಿ ಊಟ ಮಾಡದಿರುವುದರಿಂದ ಉಂಟಾಗುವ ಸಾಮಾನ್ಯ ಶಾರೀರಿಕ ಭಾವನೆ ಮಾತ್ರವಾಗಿರಬಹುದು. ಈ ಹಿನ್ನೆಲೆಯಲ್ಲಿ ಹಸಿವು ಎಂಬುದರ ಅರ್ಥವನ್ನು ಬಡವರ ಮತ್ತು ಶ್ರೀಮಂತರ ಜೀವನದ ಸನ್ನಿವೇಶಗಳ ಮೂಲಕ ಪರಿಶೀಲಿಸುವುದು ಅಗತ್ಯ.

ಮೊದಲನೆಯದಾಗಿ, ಬಡವರ ಜೀವನದಲ್ಲಿ ಹಸಿವು ಒಂದು ದಿನನಿತ್ಯದ ಹೋರಾಟವಾಗಿರುತ್ತದೆ. ದಿನಗೂಲಿ ಕಾರ್ಮಿಕರು, ಬೀದಿ ವ್ಯಾಪಾರಿಗಳು, ರೈತ ಕಾರ್ಮಿಕರು, ಕಟ್ಟಡ ಕಾರ್ಮಿಕರು ಇಂತಹವರು ದಿನವಿಡೀ ದುಡಿಯುವರು. ಅವರ ಆದಾಯ ಬಹಳ ಕಡಿಮೆ. ಕೆಲವೊಮ್ಮೆ ದಿನದ ಕೂಲಿ ಸಿಗದೆ ಇದ್ದರೆ ಕುಟುಂಬದ ಸದಸ್ಯರಿಗೆ ಸರಿಯಾದ ಊಟವೂ ಸಿಗುವುದಿಲ್ಲ. ಉದಾಹರಣೆಗೆ, ಒಂದು ಗ್ರಾಮದಲ್ಲಿ ಇರುವ ದಿನಗೂಲಿ ಕಾರ್ಮಿಕನನ್ನು ಪರಿಗಣಿಸೋಣ. ಅವನು ಬೆಳಿಗ್ಗೆಯಿಂದ ಸಂಜೆವರೆಗೆ ದುಡಿದರೂ ಅವನಿಗೆ ದೊರಕುವ ಕೂಲಿ ಬಹಳ ಕಡಿಮೆ. ಆ ಹಣದಲ್ಲಿ ಮನೆಯ ಬಾಡಿಗೆ, ಮಕ್ಕಳ ವಿದ್ಯಾಭ್ಯಾಸ, ಔಷಧಿ, ಇತರೆ ಖರ್ಚುಗಳನ್ನು ನೋಡಿಕೊಂಡ ನಂತರ ಆಹಾರಕ್ಕೆ ಉಳಿಯುವ ಹಣ ಕಡಿಮೆ ಆಗುತ್ತದೆ. ಕೆಲವೊಮ್ಮೆ ಕುಟುಂಬದ ಸದಸ್ಯರು ಹೊಟ್ಟೆತುಂಬ ಊಟ ಮಾಡದೆ ಮಲಗಬೇಕಾಗುತ್ತದೆ. ಈ ಸಂದರ್ಭದಲ್ಲಿ ಹಸಿವು ಕೇವಲ ಹೊಟ್ಟೆಯ ಭಾವನೆಯಲ್ಲ; ಅದು ನೋವು, ನಿರಾಶೆ ಮತ್ತು ಬದುಕಿನ ಕಠಿಣತೆಯನ್ನು ಸೂಚಿಸುತ್ತದೆ.

ಬಡ ಕುಟುಂಬಗಳಲ್ಲಿ ಮಕ್ಕಳು ಸಹ ಹಸಿವಿನ ನೋವನ್ನು ಅನುಭವಿಸುವರು. ಅನೇಕ ಬಾರಿ ಶಾಲೆಗೆ ಹೋಗುವ ಮಕ್ಕಳು ಸರಿಯಾದ ಉಪಾಹಾರವಿಲ್ಲದೆ ಹೋಗುವರು. ಇದರಿಂದ ಅವರ ಆರೋಗ್ಯ ಮತ್ತು ವಿದ್ಯಾಭ್ಯಾಸದ ಮೇಲೂ ಪರಿಣಾಮ ಬೀರುತ್ತದೆ. ಹಸಿವಿನಿಂದ ಮಕ್ಕಳ ಗಮನ ಅಧ್ಯಯನದ ಕಡೆ ಕೇಂದ್ರೀಕರಿಸುವುದಿಲ್ಲ. ಶಾಲೆಯಲ್ಲಿ ನೀಡುವ ಮಧ್ಯಾಹ್ನದ ಊಟವೇ ಅವರ ದಿನದ ಪ್ರಮುಖ ಆಹಾರವಾಗಿರಬಹುದು. ಇದು ಸಮಾಜದಲ್ಲಿರುವ ಅಸಮಾನತೆಯನ್ನು ಸ್ಪಷ್ಟವಾಗಿ ತೋರಿಸುತ್ತದೆ. ಹಸಿವು ಬಡ ಮಕ್ಕಳ ಕನಸುಗಳನ್ನೇ ಕುಗ್ಗಿಸುವ ಶಕ್ತಿ ಹೊಂದಿದೆ.

ಇನ್ನೊಂದು ಪ್ರಮುಖ ಅಂಶವೆಂದರೆ ಬಡವರಲ್ಲಿ ಹಸಿವು ದೀರ್ಘಕಾಲದ ಸಮಸ್ಯೆಯಾಗಿರುತ್ತದೆ. ಸರಿಯಾದ ಪೌಷ್ಟಿಕ ಆಹಾರ ಸಿಗದ ಕಾರಣ ದೌರ್ಬಲ್ಯ, ರಕ್ತಹೀನತೆ, ವಿವಿಧ ರೋಗಗಳು ಕಾಣಿಸಿಕೊಳ್ಳುತ್ತವೆ. ಇದು ಅವರ ಕೆಲಸ ಮಾಡುವ ಸಾಮರ್ಥ್ಯವನ್ನು ಕಡಿಮೆ ಮಾಡುತ್ತದೆ. ಆದಾಯ ಕಡಿಮೆಯಾಗುತ್ತದೆ. ಮತ್ತೆ ಆಹಾರ ಪಡೆಯಲು ಸಾಧ್ಯವಾಗುವುದಿಲ್ಲ. ಈ ರೀತಿಯಾಗಿ ಹಸಿವು ಮತ್ತು ಬಡತನ ಪರಸ್ಪರವನ್ನು ಬಲಪಡಿಸುವ ಒಂದು ದುಷ್ಟಚಕ್ರವಾಗಿ ಪರಿಣಮಿಸುತ್ತದೆ.

ಇದಕ್ಕೆ ವಿರುದ್ಧವಾಗಿ ಶ್ರೀಮಂತರ ಜೀವನದಲ್ಲಿ ಹಸಿವು ಸಾಮಾನ್ಯವಾಗಿ ತಾತ್ಕಾಲಿಕ ಭಾವನೆಯಷ್ಟೇ ಆಗಿರುತ್ತದೆ. ಅವರಿಗೆ ಆಹಾರವನ್ನು ಪಡೆಯಲು ಯಾವುದೇ ತೊಂದರೆ ಇರುವುದಿಲ್ಲ. ಮನೆಗಳಲ್ಲಿ ವಿಭಿನ್ನ ರೀತಿಯ ಆಹಾರ ಪದಾರ್ಥಗಳು ಲಭ್ಯವಿರುತ್ತವೆ. ಹೋಟೆಲ್‌ಗಳು, ರೆಸ್ಟೋರೆಂಟ್‌ಗಳು, ಆಹಾರ ಸೇವೆಗಳು ಎಲ್ಲವೂ ಅವರಿಗೆ ಸುಲಭವಾಗಿ ದೊರೆಯುತ್ತವೆ. ಅವರಿಗೆ ಹಸಿವು ಅನ್ನಿಸುವುದು ಬಹುಶಃ ಊಟದ ಸಮಯ ಬದಲಾಗುವುದರಿಂದ ಅಥವಾ ಕೆಲವು ಗಂಟೆಗಳ ಕಾಲ ಏನನ್ನೂ ತಿನ್ನದೆ ಇರುವುದರಿಂದ ಮಾತ್ರ. ಹಸಿವನ್ನು ತಣಿಸಲು ಅವರಿಗೆ ಅನೇಕ ಆಯ್ಕೆಗಳಿರುತ್ತವೆ.

ಉದಾಹರಣೆಗೆ, ಒಂದು ಶ್ರೀಮಂತ ಕುಟುಂಬದ ಜೀವನವನ್ನು ಪರಿಗಣಿಸೋಣ. ಮನೆಯಲ್ಲಿರುವ ಮಕ್ಕಳು ಬೆಳಿಗ್ಗೆ ಉಪಾಹಾರವಾಗಿ ಹಲವು ವಿಧದ ಆಹಾರವನ್ನು ತಿನ್ನುವರು. ಮಧ್ಯಾಹ್ನ ಶಾಲೆಯಲ್ಲಿ ಅಥವಾ ಮನೆಯಲ್ಲಿ ಉತ್ತಮ ಊಟ ಸಿಗುತ್ತದೆ. ಸಂಜೆ ತಿಂಡಿ, ರಾತ್ರಿ ರುಚಿಕರವಾದ ಊಟ ಇವೆಲ್ಲವೂ ಸುಲಭವಾಗಿ ದೊರೆಯುತ್ತವೆ. ಹಸಿವು ಅವರಿಗೆ ಒಂದು ಸಾಮಾನ್ಯ ದೇಹದ ಸೂಚನೆ ಮಾತ್ರ. ಅದು ದೀರ್ಘಕಾಲದ ನೋವು ಅಥವಾ ಬದುಕಿನ ಸಂಕಷ್ಟವಲ್ಲ.

ಕೆಲವೊಮ್ಮೆ ಶ್ರೀಮಂತರಲ್ಲಿ ಹಸಿವು ಉದ್ದೇಶಪೂರ್ವಕವಾಗಿ ಕೂಡ ಉಂಟಾಗುತ್ತದೆ. ಉದಾಹರಣೆಗೆ, ಆರೋಗ್ಯ ಕಾಪಾಡಿಕೊಳ್ಳಲು ಅಥವಾ ತೂಕ ಕಡಿಮೆ ಮಾಡಲು ಕೆಲವು ಜನರು ಉಪವಾಸ ಅಥವಾ ಡೈಟ್ ಪಾಲಿಸುವರು. ಅವರು ಕೆಲವು ಸಮಯ ಆಹಾರ ಸೇವಿಸದೆ ಇರುವರು. ಆದರೆ ಅದು ಅವರ ಆಯ್ಕೆಯಾಗಿದೆ. ಯಾವಾಗ ಬೇಕಾದರೂ ಆಹಾರ ಸೇವಿಸುವ ಅವಕಾಶ ಅವರಿಗೆ ಇದೆ. ಹೀಗಾಗಿ ಅವರ ಹಸಿವು ಸ್ವಯಂ ನಿಯಂತ್ರಿತವಾದದ್ದು; ಅದು ಬಡವರ ಹಸಿವಿನಂತಲ್ಲ.

ಸಾಮಾಜಿಕ ದೃಷ್ಟಿಯಿಂದ ನೋಡಿದರೆ ಹಸಿವು ಒಂದು ದೊಡ್ಡ ಸಮಸ್ಯೆಯಾಗಿದೆ. ವಿಶೇಷವಾಗಿ ಅಭಿವೃದ್ಧಿಶೀಲ ದೇಶಗಳಲ್ಲಿ ಇನ್ನೂ ಅನೇಕ ಜನರು ಪೌಷ್ಟಿಕ ಆಹಾರವಿಲ್ಲದೆ ಬದುಕುತ್ತಿದ್ದಾರೆ. ನಗರಗಳ ಬೀದಿಗಳಲ್ಲಿ ವಾಸಿಸುವ ಅನೇಕ ಜನರು ಪ್ರತಿದಿನ ಆಹಾರಕ್ಕಾಗಿ ಹೋರಾಟ ನಡೆಸುವರು. ಕೆಲವೊಮ್ಮೆ ಹೋಟೆಲ್‌ಗಳಲ್ಲಿ ಅಥವಾ ಮದುವೆ ಸಮಾರಂಭಗಳಲ್ಲಿ ಆಹಾರ ವ್ಯರ್ಥವಾಗುತ್ತದೆ. ಅದೇ ಸಮಯದಲ್ಲಿ ಕೆಲವು ಜನರಿಗೆ ಒಂದು ಹೊತ್ತಿನ ಊಟವೂ ಸಿಗುವುದಿಲ್ಲ. ಈ ವ್ಯತ್ಯಾಸವು ಸಮಾಜದ ಅಸಮಾನತೆಯನ್ನು ತೀವ್ರವಾಗಿ ತೋರಿಸುತ್ತದೆ.

ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಸಮಾಜದ ಪ್ರತಿಯೊಬ್ಬರೂ ಜವಾಬ್ದಾರಿ ಹೊಂದಿದ್ದಾರೆ. ಸರ್ಕಾರವು ಬಡವರಿಗೆ ಆಹಾರ ಭದ್ರತೆ ಒದಗಿಸುವ ಯೋಜನೆಗಳನ್ನು ರೂಪಿಸಬೇಕು. ಅಗ್ಗದ ದರದಲ್ಲಿ ಧಾನ್ಯಗಳನ್ನು ನೀಡುವ ವ್ಯವಸ್ಥೆ, ಶಾಲೆಗಳಲ್ಲಿ ಮಧ್ಯಾಹ್ನದ ಊಟ ಯೋಜನೆ, ಪೌಷ್ಟಿಕ ಆಹಾರ ಕಾರ್ಯಕ್ರಮಗಳು ಇವುಗಳು ಬಹಳ ಉಪಯುಕ್ತವಾಗಿವೆ. ಇವುಗಳ ಮೂಲಕ ಅನೇಕ ಬಡ ಕುಟುಂಬಗಳಿಗೆ ನೆರವು ದೊರೆಯುತ್ತದೆ.

ಇದರ ಜೊತೆಗೆ ಸಮಾಜದಲ್ಲಿರುವ ಶ್ರೀಮಂತ ವರ್ಗವೂ ತಮ್ಮ ಸಾಮಾಜಿಕ ಜವಾಬ್ದಾರಿಯನ್ನು ಅರಿತುಕೊಳ್ಳಬೇಕು. ಆಹಾರವನ್ನು ವ್ಯರ್ಥ ಮಾಡದೆ ಉಳಿದ ಆಹಾರವನ್ನು ಅಗತ್ಯವಿರುವವರಿಗೆ ನೀಡುವುದು, ದಾನ ಧರ್ಮಗಳಲ್ಲಿ ಪಾಲ್ಗೊಳ್ಳುವುದು, ಅನಾಥಾಶ್ರಮಗಳು ಮತ್ತು ಬಡವರಿಗೆ ನೆರವು ನೀಡುವ ಸಂಸ್ಥೆಗಳಿಗೆ ಸಹಾಯ ಮಾಡುವುದು ಇವುಗಳ ಮೂಲಕ ಹಸಿವಿನ ಸಮಸ್ಯೆಯನ್ನು ಕೆಲವು ಮಟ್ಟಿಗೆ ಕಡಿಮೆ ಮಾಡಬಹುದು. ಸಮಾಜದಲ್ಲಿ ಸಹಾನುಭೂತಿ ಮತ್ತು ಮಾನವೀಯತೆ ಹೆಚ್ಚಾದರೆ ಹಸಿವಿನಂತಹ ಸಮಸ್ಯೆಗಳು ನಿಧಾನವಾಗಿ ಕಡಿಮೆಯಾಗಬಹುದು.

ಮಾನವೀಯ ಮೌಲ್ಯಗಳ ದೃಷ್ಟಿಯಿಂದ ನೋಡಿದರೆ ಹಸಿವು ಕೇವಲ ದೇಹದ ಅಗತ್ಯವಲ್ಲ; ಅದು ಸಾಮಾಜಿಕ ನ್ಯಾಯದ ಪ್ರಶ್ನೆಯೂ ಆಗಿದೆ. ಪ್ರತಿಯೊಬ್ಬ ಮಾನವನಿಗೂ ಹೊಟ್ಟೆತುಂಬ ಆಹಾರ ಸಿಗಬೇಕು ಎಂಬುದು ಮೂಲಭೂತ ಹಕ್ಕು. ಯಾರೂ ಹಸಿವಿನಿಂದ ನರಳಬಾರದು. ಆದರೆ ವಾಸ್ತವದಲ್ಲಿ ಇನ್ನೂ ಅನೇಕ



ಕಾಲ್ಪನಿಕ ಚಿತ್ರ

ಜನರು ಹಸಿವಿನಿಂದ ಬಳಲುತ್ತಿದ್ದಾರೆ. ಇದನ್ನು ನಿವಾರಿಸಲು ಸಮಾನ ಅವಕಾಶಗಳು ಮತ್ತು ಸಂಪನ್ಮೂಲಗಳ ನ್ಯಾಯಸಮ್ಮತ ಹಂಚಿಕೆ ಅಗತ್ಯ.

ಅಂತಿಮವಾಗಿ ಹೇಳುವುದಾದರೆ, ಹಸಿವು ಎಂಬ ಅನುಭವವು ಬಡವರಿಗೂ ಶ್ರೀಮಂತರಿಗೂ ಬಹಳ ಭಿನ್ನವಾಗಿದೆ. ಬಡವರಿಗೆ ಅದು ಬದುಕಿನ ಕಠಿಣ ಹೋರಾಟವಾಗಿದ್ದರೆ, ಶ್ರೀಮಂತರಿಗೆ ಅದು ತಾತ್ಕಾಲಿಕ ದೇಹದ ಸೂಚನೆಯಷ್ಟೇ. ಬಡವರಿಗೆ ಹಸಿವು ನೋವು, ನಿರಾಶೆ ಮತ್ತು ಕೊರತೆಯನ್ನು ಸೂಚಿಸಿದರೆ, ಶ್ರೀಮಂತರಿಗೆ ಅದು ಸುಲಭವಾಗಿ ತಣಿಸಬಹುದಾದ ಭಾವನೆ ಮಾತ್ರ. ಈ ವ್ಯತ್ಯಾಸವು ಸಮಾಜದಲ್ಲಿರುವ ಆರ್ಥಿಕ ಅಸಮಾನತೆಯ ಪ್ರತಿಫಲನವಾಗಿದೆ.

ಹೀಗಾಗಿ ಸಮಾಜವು ಸಮಾನತೆ ಮತ್ತು ಮಾನವೀಯತೆ ಎಂಬ ಮೌಲ್ಯಗಳನ್ನು ಬಲಪಡಿಸಬೇಕು. ಆಹಾರವನ್ನು ವ್ಯರ್ಥ ಮಾಡದೆ ಅಗತ್ಯವಿರುವವರಿಗೆ ಸಹಾಯ ಮಾಡುವುದು, ಬಡವರ ಕಲ್ಯಾಣಕ್ಕಾಗಿ ಸರ್ಕಾರದ ಯೋಜನೆಗಳನ್ನು ಬಲಪಡಿಸುವುದು, ಸಮಾಜದಲ್ಲಿ ಪರಸ್ಪರ ಸಹಾನುಭೂತಿ ಬೆಳೆಸುವುದು ಇವುಗಳ ಮೂಲಕ ಹಸಿವಿನ ಸಮಸ್ಯೆಯನ್ನು ಕಡಿಮೆ ಮಾಡಬಹುದು. ಪ್ರತಿಯೊಬ್ಬ ಮಾನವನಿಗೂ ಹೊಟ್ಟೆತುಂಬ ಆಹಾರ ಸಿಗುವ ದಿನ ಬಂದಾಗ ಮಾತ್ರ ಸಮಾಜವು ನಿಜವಾದ ಪ್ರಗತಿಯನ್ನು ಸಾಧಿಸಿದೆ ಎಂದು ಹೇಳಬಹುದು.



**–ಡಾ ರವಿರಾಜು ಡಿ**
**ಸಹಾಯಕ ಪ್ರಾಧ್ಯಾಪಕರು ರಾಯಚೂರು..............**

# ಕುಡಿಯುವ ನೀರಿನ ಸಮನ್ವಯ ಸಮಿತಿ ಸಭೆ ನಡೆಸಲು ಜಿ.ಪಂ. ಸಿಇಓ ಸೂಚನೆ



**ಮಂಡ್ಯ:ಮಾ.13:–** ಗ್ರಾಮಂತರ ಪ್ರದೇಶದಲ್ಲಿ ಸಾರ್ವಜನಿಕರಿಗೆ ಸಾಕಷ್ಟು ಪ್ರಮಾಣದ ಗುಣಮಟ್ಟದ ನೀರು ಸರಬರಾಜು ಮಾಡುವಂತೆ ಹಾಗೂ ಕುಡಿಯುವ ನೀರು ಸರಬರಾಜಿನಲ್ಲಿ ಯಾವುದೇ ವ್ಯತ್ಯಯವಾಗದಂತೆ ಕ್ರಮವಹಿಸಲು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಇಂಜಿನಿಯರ್ ಗಳಿಗೆ ಜಿ.ಪಂ. ಸಿಇಓ ನಂದಿನಿ ಕೆ.ಆರ್. ಸೂಚಿಸಿದರು.

ಗುರುವಾರ ಜಿಲ್ಲಾ ಪಂಚಾಯತ್ ನ ಕೆಸ್ವಾನ್ ಸಭಾಂಗಣದಲ್ಲಿ ನಡೆದ ಜಿಲ್ಲಾ ನೀರು ಮತ್ತು ನೈರ್ಮಲ್ಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬೇಸಿಗೆ ಸಂದರ್ಭದಲ್ಲಿ ಸಮಸ್ಯೆ ಎದುರಾಗಬಹುದಾದ ಗ್ರಾಮಗಳಲ್ಲಿ ತೆಗೆದುಕೊಳ್ಳಬೇಕಾದ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಗ್ರಾ.ಪಂ.ಗಳೊಂದಿಗೆ ಸಮನ್ವಯ ಸಾಧಿಸಿ ಕ್ರಮವಹಿಸುವಂತೆ ಸೂಚಿಸಿದರು.

ತುರ್ತು ಅವಶ್ಯಕತೆ ಇರುವ ಕಾಮಗಾರಿಗಳ ಕ್ರಿಯಾ ಯೋಜನೆಯನ್ನು ಸಿದ್ದಪಡಿಸಿ ಜಿಲ್ಲಾ ನೀರು ಮತ್ತು ನೈರ್ಮಲ್ಯ ಸಮಿತಿ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆಯಲು ಸಭೆ ಏರ್ಪಡಿಸಲಾಗಿದ್ದು, ಸರ್ಕಾರದಿಂದ ಅನುಮೋದನೆಯಾದ ಮೊತ್ತಕ್ಕೆ ಹಾಗೂ ತೆಗೆದುಕೊಳ್ಳಬಹುದಾದ ಕಾಮಗಾರಿಗಳಿಗೆ ಮಾತ್ರ ನಿಯಮಾನುಸಾರ ಅನುಮೋದನೆ ಪಡೆಯಲು ಸೂಚಿಸಿದರು.

ತುರ್ತು ಅವಶ್ಯಕತೆ ಇರುವ ಕಾಮಗಾರಿಗಳ ಪೈಕಿ ಜಲ ಜೀವನ ಮಿಷನ್ ಯೋಜನೆಯಡಿ ಸೇರ್ಪಡೆಯಾಗದಿರುವ ಕಾಮಗಾರಿಗಳಾದ ಓಹೆಟಿ ರಿಪೇರಿ, ಓಹೆಟಿ ಗಳಿಗೆ ಲ್ಯಾಡರ್ ಅಳವಡಿಸುವುದು, ಫೆನ್ಸಿಂಗ್ ಹಾಕಿಸುವುದು, ಶುದ್ಧ ಕುಡಿಯುವ ನೀರಿನ ಘಟಕಗಳ ರಿಪೇರಿ, ಬಲ್ಕ್ ಮೀಟರ್ ಅಳವಡಿಸುವುದು, ಬೋರ್ ವೆಲ್ ಗಳಿಗೆ ಕ್ಲೋರಿನೇಷನ್ ಘಟಕ ಅಳವಡಿಸುವುದು, ಎಲೆಕ್ಟ್ರೋ ಫ್ಯೂಷನ್ ಮೆಷಿನ್ ಖರೀದಿಯಂತಹ ಚಟುವಟಿಕೆಗಳಿಗೆ ಅನುದಾನ ನಿಗಧಿಗೊಳಿಸಿದ್ದು, ಸದರಿ ಚಟುವಟಿಕೆಗಳನ್ನು ನಿಯಮಾನುಸಾರ ಅನುಷ್ಠಾನ ಮಾಡಲು ಸೂಚಿಸಿದರು.

ತಾಲ್ಲೂಕು ಪ್ರಯೋಗಾಲಯಗಳನ್ನು ಮೇಲ್ದರ್ಜೆಗೇರಿಸಲು ಅನುದಾನ ಬಿಡುಗಡೆ ಮಾಡುವಂತೆ ರಾಜ್ಯ ಕಚೇರಿಗೆ ಮನವಿ ಸಲ್ಲಿಸಲಾಗಿತ್ತು, ಪ್ರಸ್ತುತ ಪಾಂಡವಪುರ ತಾಲ್ಲೂಕಿನ ಕುಡಿಯುವ ನೀರು ಪರೀಕ್ಷಾ ಪ್ರಯೋಗಾಲಯವನ್ನು ಮೇಲ್ದರ್ಜೆಗೇರಿಸಲು ಅನುಮತಿ ದೊರೆತಿದ್ದು, ಸಕ್ಷಮ ಪ್ರಾಧಿಕಾರದಿಂದ ಅನುಮತಿ ಪಡೆದು ಕಾಮಗಾರಿ ಪೂರ್ಣಗೊಳಿಸುವಂತೆ ಸೂಚಿಸಿದರು.

ಪ್ರತೀ ಸೋಮವಾರ ತಾಲ್ಲೂಕು ಮಟ್ಟದ ಕುಡಿಯುವ ನೀರಿನ **ಸಮನ್ವಯ ಸಭೆ ನಡೆಸಲು ಸೂಚನೆ:** ಬೇಸಿಗೆ ಸಮೀಪಿಸುತ್ತಿರುವುದರಿಂದ ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯತ್ ಗಳ ಇಓಗಳು, ತಹಶಿಲ್ದಾರ್ ಗಳು ಮತ್ತು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರುಗಳು ಸಮನ್ವಯ ಸಭೆ ನಡೆಸಿ, ಕುಡಿಯುವ ನೀರಿನ ಸಮಸ್ಯೆಗಳ ಬಗ್ಗೆ ಚರ್ಚಿಸಿ, ತೆಗೆದುಕೊಂಡ ಕ್ರಮಗಳ ಬಗ್ಗೆ ಮಾಹಿತಿ ನೀಡುವಂತೆ ಸೂಚಿಸಿದರು.

ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳ ಕಾರ್ಯಾಚರಣೆ ಮತ್ತು ನಿರ್ವಹಣೆಯ ಬಗ್ಗೆ ಎಸ್ ಓ ಪಿ ಯಂತೆ ಪರಿಶೀಲನೆ ಮಾಡಲು ಈ ಹಿಂದೆಯೇ ಸೂಚಿಸಲಾಗಿತ್ತು. ಅದರಂತೆ, ಎಲ್ಲಾ ಎಂ.ವಿ.ಎಸ್. ಯೋಜನೆಗಳ ಕಾರ್ಯಾಚರಣೆ ಮತ್ತು ನಿರ್ವಹಣೆಯ ಬಗ್ಗೆ ಇಂಜಿನಿಯರ್ ಗಳು ಖುದ್ದು ಪರಿಶೀಲಿಸಿ, ನ್ಯೂನ್ಯತೆಗಳಿದ್ದಲ್ಲಿ ಸರಿಪಡಿಸಲು ಕ್ರಮವಹಿಸುವಂತೆ ಸೂಚಿಸಿದರು.

ಶುದ್ಧ ಕುಡಿಯುವ ನೀರಿನ ಘಟಕಗಳು ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು, ಒಂದುವೇಳೆ ಕಾರ್ಯನಿರ್ವಹಿಸುತ್ತಿದ್ದಲ್ಲಿ ತುರ್ತು ಕ್ರಮವಹಿಸಿ ರಿಪೇರಿ ಮಾಡಿಸಿ ಘಟಕವನ್ನು ಚಾಲನೆಗೊಳಿಸಬೇಕೆಂದು ಸೂಚಿಸಿದರು.

ಈ ಸಂದರ್ಭದಲ್ಲಿ ಕಾರ್ಯಪಾಲಕ ಅಭಿಯಂತರರಾದ ಪ್ರಮೋದ್ ಕುಮಾರ್ ಎನ್.ಜಿ., ಸಹಾಯಕ ಕಾರ್ಯಪಾಲಕ ಅಭಿಯಂತರರಾದ ರಶ್ಮಿ, ಮಮತಾ, ಸುಷ್ಮಾ, ಗಿರಿಜೇಶ್, ಮಧುಸೂದನ್ ಸೇರಿದಂತೆ ಇತರರು ಹಾಜರಿದ್ದರು.

# ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಮಹಿಳೆಯರ ಪಾತ್ರ ಮಹತ್ವದ್ದು: ನ್ಯಾಯಾಧೀಶೆ ಸುಮನ್ ಚಿತ್ತರಗಿ

**ಆಳಂದ:ಮಾ.13:** ಸಮಾಜದ ಆರೋಗ್ಯಕರ ಅಭಿವೃದ್ಧಿಗಾಗಿ ವ್ಯಸನಮುಕ್ತ ಅಭಿಯಾನ ಅತ್ಯಂತ ಅಗತ್ಯವಾಗಿದ್ದು, ಇದರಿಂದ ಸಮಾಜದ ಸ್ವಾಸ್ಥ್ಯ ಕಾಪಾಡಲು ಸಾಧ್ಯವಾಗುತ್ತದೆ ಎಂದು ಸ್ಥಳೀಯ ಜೆಎಂಎಸಿ ಪ್ರಧಾನ ಸಿವಿಲ್ ನ್ಯಾಯಾಧೀಶೆ ಹಾಗೂ ಕಾನೂನು ಅರಿವು–ನೆರವು ಸಮಿತಿ ಸದಸ್ಯೆ ಕಾರ್ಯದರ್ಶಿ ಕುಮಾರಿ ಸುಮನ್ ಚಿತ್ತರಗಿ ಹೇಳಿದರು.

ಪಟ್ಟಣದ ನ್ಯಾಯಾಲಯ ಆವರಣದಲ್ಲಿ ಕಾನೂನು ಸೇವಾ ಸಮಿತಿ, ನ್ಯಾಯವಾದಿಗಳ ಸಂಘ, ಬ್ರಹ್ಮಾಕುಮಾರಿಸ್ ಹಾಗೂ ಪತ್ರಕರ್ತರ ಸಂಘದ ಆಶ್ರಯದಲ್ಲಿ ಆಯೋಜಿಸಿದ್ದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಮತ್ತು ವ್ಯಸನಮುಕ್ತ ಭಾರತ ಅಭಿಯಾನದ ಅಂಗವಾಗಿ ನಡೆದ ಕಾನೂನು ಅರಿವು–ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಮಹಿಳೆಯರು ಅನೇಕ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ್ದರೂ ಸಮಾಜದಲ್ಲಿ ಇನ್ನೂ ಹಲವಾರು ಸವಾಲುಗಳು ಮುಂದುವರಿದಿವೆ. ಕುಟುಂಬ ಮತ್ತು ಸಮಾಜದ ಸುಸ್ಥಿತಿಗೆ ಮಹಿಳೆಯರ ಜಾಗೃತಿ ಹಾಗೂ ಜವಾಬ್ದಾರಿ ಅಗತ್ಯವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು. ವ್ಯಸನಗಳಿಂದ ದೂರವಿದ್ದು ಆರೋಗ್ಯಕರ ಜೀವನ ನಡೆಸುವ ಮೂಲಕ ಸಮಾಜವನ್ನು ಉತ್ತಮ ದಿಕ್ಕಿನತ್ತ ಕೊಂಡೊಯ್ಯಬೇಕು ಎಂದು ಸಲಹೆ ನೀಡಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕಲಬುರಗಿ ಅಮೃತ ಸರೋವರ ಸಂಚಾಲಕಿ ರಾಜಯೋಗಿನಿ ಬಿ.ಕೆ. ಶಿವಲೀಲಾ ಅಕ್ಕ ಮಾತನಾಡಿ, ವ್ಯಸನಮುಕ್ತ ಸಮಾಜ ನಿರ್ಮಾಣದಲ್ಲಿ ಮಹಿಳೆಯರ ಪಾತ್ರ ಅತ್ಯಂತ ಮುಖ್ಯವಾಗಿದೆ. ಚಟಗಳಿಗೆ ಪ್ರಮುಖ ಕಾರಣ ಸಂಗತಿ ಮತ್ತು ಜೀವನದ ಸಮಸ್ಯೆಗಳಾಗಿವೆ. ಆದರೆ ಪ್ರತೀ ಮನೆಗಳಲ್ಲಿ ಪತಿ–ಪತ್ನಿಯರು ಪರಸ್ಪರ ಹೊಂದಾಣಿಕೆ ಮತ್ತು ಸಹಕಾರದಿಂದ ಜೀವನ ನಡೆಸಿದರೆ ವ್ಯಸನಗಳ ದಾಸ್ಯದಿಂದ ದೂರವಾಗಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಮಹಿಳೆಯರು ವಿವಿಧ ಕ್ಷೇತ್ರಗಳಲ್ಲಿ ಗಗನಕ್ಕೇರಿದ ಸಾಧನೆ ಮಾಡಿದರೂ ಸಮಾಜದಲ್ಲಿ ನೈತಿಕ ಮೌಲ್ಯಗಳು ಕುಗ್ಗುತ್ತಿರುವುದು



ಕಳವಳಕಾರಿ. ಇದನ್ನು ಯಾರ ಮೇಲೂ ದೋಷಾರೋಪಣೆ ಮಾಡದೇ, ಪ್ರತಿಯೊಬ್ಬರೂ ತಮ್ಮನ್ನು ತಾವು ಗೌರವಿಸಿಕೊಂಡು ರಕ್ಷಿಸಿಕೊಳ್ಳುವ ಮನೋಭಾವ ಬೆಳೆಸಿಕೊಳ್ಳಬೇಕು. ಸಾಧನೆಯ ಜೊತೆಗೆ ಸಭ್ಯತೆ ಮತ್ತು ಸಂಸ್ಕಾರಗಳನ್ನು ಅಳವಡಿಸಿಕೊಳ್ಳುವುದು ಅಗತ್ಯ ಎಂದು ಅವರು ಹೇಳಿದರು. ಇಂದಿನ ಜೀವನಶೈಲಿಯಲ್ಲಿ ಆಹಾರ ಪದ್ಧತಿಗಳ ಬದಲಾವಣೆ ಮತ್ತು ಧ್ಯಾನ ಕಡಿಮೆಯಾಗಿರುವುದರಿಂದ ಆರೋಗ್ಯ ಸಮಸ್ಯೆಗಳು ಹೆಚ್ಚಾಗುತ್ತಿವೆ ಎಂದು ತಿಳಿಸಿದರು.

ಉಪನ್ಯಾಸ ನೀಡಿದ ಕಲಬುರಗಿ ಬ್ರಹ್ಮಾಕುಮಾರಿಸ್ ಶಿಕ್ಷಣ ಸಂಯೋಜಕಿ ರಾಜಯೋಗಿನಿ ಬಿ.ಕೆ. ಸವಿತಾ ಅಕ್ಕ ಅವರು ಅಂತರರಾಷ್ಟ್ರೀಯ ಮಹಿಳಾ ದಿನದ ಮಹತ್ವ ಹಾಗೂ ವ್ಯಸನ ನಿರ್ಮೂಲನೆಗೆ ಬ್ರಹ್ಮಾಕುಮಾರಿಸ್ ಸಂಸ್ಥೆಯ ಮೂಲಕ ದೊರೆಯುವ ಮಾರ್ಗದರ್ಶನ ಮತ್ತು ಲಾಭಗಳ ಕುರಿತು ವಿವರಿಸಿದರು.

ನ್ಯಾಯವಾದಿಗಳ ಸಂಘದ ಅಧ್ಯಕ್ಷ ಕಮಲ ರಾಠೋಡ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಕಾರ್ಯದರ್ಶಿ ಬಿ.ಟಿ. ಸಿಂಧೆ, ಸರ್ಕಾರಿ ವಕೀಲೆ ಜ್ಯೋತಿ ವಿ. ಬಂದಿ, ಪತ್ರಕರ್ತರ ಸಂಘದ ಮಹಾದೇವ ವಡಗಾಂವ, ಬಿ.ಕೆ. ಜಗದೇವಿ ಅಕ್ಕ, ಬಿ.ಕೆ. ಶರಣಬಸಪ್ಪ ಹೀರಾ ಸೇರಿದಂತೆ ಹಲವಾರು ನ್ಯಾಯವಾದಿಗಳು ಹಾಗೂ ಕಕ್ಷಿದಾರರು ಉಪಸ್ಥಿತರಿದ್ದರು.

ನ್ಯಾಯವಾದಿ ಸುಧೀರ ಬಿ. ಪಡಶೆಟ್ಟಿ ನಿರೂಪಿಸಿದರು. ಕಲ್ಯಾಣರಾವ್ ಎಂ. ಶೇರಿಕಾರ ವಂದಿಸಿದರು.

# ಮಾದಿಗ ಸಮಾಜದಿಂದ ಒಳ ಮೀಸಲಾತಿಗಾಗಿ ಪ್ರತಿಭಟನೆ

**ಕಲಬುರಗಿ:ಮಾ.13:** ಮಾದಿಗ ಸಮಾಜಕ್ಕೆ ಸಂಪೂರ್ಣ ಒಳ ಮೀಸಲಾತಿ ಕಲ್ಪಿಸಬೇಕು ಹಾಗೂ ರಾಜ್ಯ ಸರ್ಕಾರವು ಪ್ರಕಟಿಸಿರುವ 56,432 ಸರ್ಕಾರಿ ಹುದ್ದೆಗಳಲ್ಲಿ ಶೇಕಡಾ 6ರಷ್ಟು ಒಳ ಮೀಸಲಾತಿಯನ್ನು ಎ.ಬಿ.ಸಿ ವರ್ಗೀಕರಣದಂತೆ ಜಾರಿಗೊಳಿಸಬೇಕು ಎಂದು ಆಗ್ರಹಿಸಿ ಮಾದಿಗ ಸಮಾಜದ ಮುಖಂಡರು ಬೆಂಗಳೂರಿನ ಫ್ರೀಡಂ ಪಾರ್ಕನಲ್ಲಿ ಪ್ರತಿಭಟನೆ ನಡೆಸಿದರು.ಪ್ರತಿಭಟನಾಕಾರರು ಕಾಂಗ್ರೆಸ್ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ, ಮಾದಿಗ ಸಮಾಜಕ್ಕೆ ನ್ಯಾಯ ದೊರಕುವಂತೆ ಒಳ ಮೀಸಲಾತಿ ತಕ್ಷಣ ಜಾರಿಗೆ ತರಬೇಕು ಎಂದು ಒತ್ತಾಯಿಸಿದರು.ಈ ಸಂದರ್ಭದಲ್ಲಿ ಕಲಬುರಗಿ ಜಿಲ್ಲಾ ಬಿಜೆಪಿ ಪಕ್ಷದ ಎಸ್‌ಸಿ ಮೋರ್ಚಾ ಅಧ್ಯಕ್ಷರು ಹಾಗೂ ಮಾದಿಗ ಸಮಾಜದ ಮುಖಂಡರಾದ ಮಲ್ಲಿಕಾರ್ಜುನ್ ಜಿನಿಕೇರಿ, ಬಿಜೆಪಿ ಪಕ್ಷದ ಹಿರಿಯ ಮುಖಂಡರಾದ ರಾಜು ವಾಡೆಕರ್, ಹೋರಾಟಗಾರರಾದ ಶರಣು ಸಗರಕಾರ್, ಕೃಷ್ಣ ತಂಗಡಗಿ, ಪರಶುರಾಮ್ ರಾಕುಂಪಿ, ಅಮೃತ್ ಕೊರಳಿ, ಶಿವಶಂಕರ್ ಬಂದ್ರವಾಡ, ಶಿವಪುತ್ರ ನಾಗನಹಳ್ಳಿ ಸೇರಿದಂತೆ ಮಾದಿಗ ಸಮಾಜದ ಹಲವು ಮುಖಂಡರು ಮತ್ತು ಹೋರಾಟಗಾರರು ಉಪಸ್ಥಿತರಿದ್ದರು.

# ಸುಧಾಕ್ರಾಸ್ ನಿಂದ ಹೊಸಪೇಟೆ ಕಡೆ ಚತುಷ್ಪಥ ರಸ್ತೆಗೆ ಸಚಿವ ಗಡ್ಕರಿ ಸಮ್ಮತಿ: ತುಕರಾಂ



**ಬಳ್ಳಾರಿ, ಮಾ.13:** ನವದೆಹಲಿಯಲ್ಲಿ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ರವರನ್ನು ಲೋಕಸಭಾ ಸದಸ್ಯ ಈ.ತುಕರಾಂ ನಿನ್ನೆ ಭೇಟಿ ಮಾಡಿ. ಬಳ್ಳಾರಿ ನಗರದ ಪ್ರಮುಖ ಸಮಸ್ಯೆಯಾಗಿರುವ ರಾಷ್ಟ್ರೀಯ ಹೆದ್ದಾರಿ 67 ರ ರಸ್ತೆ ಸಂಚಾರ ದಟ್ಟಣೆ ಮತ್ತು ಮೂಲಸೌಕರ್ಯ ಕೊರತೆಯನ್ನು ಶಾಶ್ವತವಾಗಿ ಪರಿಹರಿಸಲು. ಹೈವೇ ಬೈ-ಪಾಸ್ ನಿಂದ ಸುಧಾ ಕ್ರಾಸ್ ವರೆಗಿನ ರಸ್ತೆಯನ್ನು ಎರಡು ಲೇನ್ನಿಂದ ನಾಲ್ಕು ಲೇನ್ಗೆ ಅಭಿವೃದ್ಧಿಪಡಿಸಲು ಸುಮಾರು 90 ಕೋಟಿ. ಬಳಿ ಹಗರಿ ನದಿಗೆ ಸೇತುವೆ ನಿರ್ಮಾಣಕ್ಕೆ 60 ಕೋಟಿ ಅನುದಾನ ನೀಡುವಂತೆ ಮನವಿ ಮಾಡಿದ್ದಾರೆ.

ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಸಚಿವರು ಬಳ್ಳಾರಿ ಬೈ-ಪಾಸ್ ನಿಂದ ಸುಧಾ ಕ್ರಾಸ್ ರೆಗಿನ ರಸ್ತೆಯನ್ನು ಎರಡು ಲೇನ್ನಿಂದ ನಾಲ್ಕು ಲೇನ್ಗೆ ಅಭಿವೃದ್ಧಿಪಡಿಸಲು ಕೂಡಲೇ ಅನುಮೋದನೆ ನೀಡುವುದಾಗಿ ಹಾಗೂ ಗುಳ್ಯಂ ಸೇತುವೆ ನಿರ್ಮಾಣಕ್ಕೆ ಕೇಂದ್ರ ರಸ್ತೆ ಮತ್ತು ಮೂಲಸೌಕರ್ಯ ನಿಧಿ ಅಡಿಯಲ್ಲಿ ಅನುದಾನ ನೀಡಲು ಕ್ರಮ ತೆಗೆದುಕೊಳ್ಳುವುದಾಗಿ ಭರವಸೆ ನೀಡಿದ್ದಾರೆ .

ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ ಕೈಗಾರಿಕಾ ಬೆಳವಣಿಗೆ, ರಾಜ್ಯಾಂತರ ಸಂಪರ್ಕ ಮತ್ತು ಸಾರ್ವಜನಿಕರ ಸುರಕ್ಷತೆಗಾಗಿ ಈ ರಸ್ತೆ ಅತ್ಯಂತ ಮಹತ್ವದ್ದಾಗಿದ್ದು, ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಟ್ರಾಫಿಕ್ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವ ಅಗತ್ಯವನ್ನು ಸ್ಪಷ್ಟವಾಗಿ ಸರ್ಕಾರದ ಮುಂದೆ ಮಂಡಿಸಿದೆ ಎಂದು ತುಕರಾಂ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಸ್ಪತ್ರೆಗಳಲ್ಲಿ ಔಷಧ ಕೊರತೆ ಸರಿಪಡಿಸಿ : ವಿಧಾನಸಭೆಯಲ್ಲಿ ಶಾಸಕ ಚವ್ಹಾಣ ಆಗ್ರಹ



**ಔರಾದ್ :ಮಾ.13:** ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧ ಕೊರತೆ ಉಂಟಾಗುತ್ತಿರುವ ಬಗ್ಗೆ ಬೆಂಗಳೂರಿನಲ್ಲಿ ನಡೆಯುತ್ತಿರುವ ವಿಧಾನಸಭಾ ಅಧಿವೇಶನದಲ್ಲಿ ಶಾಸಕ ಪ್ರಭು ಬಿ. ಚವ್ಹಾಣ ಅವರು ಸರ್ಕಾರದ ಗಮನ ಸೆಳೆದರು.

ಔರಾದ(ಬಿ) ವಿಧಾನಸಭಾ ಕ್ಷೇತ್ರವು ತೆಲಂಗಾಣ ಹಾಗೂ ಮಹಾರಾಷ್ಟ್ರ ರಾಜ್ಯಗಳ ಗಡಿಭಾಗದಲ್ಲಿರುವ ಗಡಿ ಕ್ಷೇತ್ರವಾಗಿದ್ದು, ಇಲ್ಲಿನ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧದ ಕೊರತೆ ಹೆಚ್ಚಾಗಿದೆ. ಬೇರೆ ಭಾಗಗಳಿಗೆ ಹೋಲಿಸಿದರೆ ನಮ್ಮಲ್ಲಿ ಸಮಸ್ಯೆ ಬಹಳಷ್ಟಿದ್ದು, ಇದರಿಂದ ಬಡ ರೋಗಿಗಳು ತೀವ್ರ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ ಎಂದು ಸಮಸ್ಯೆಯ ಗಂಭೀರತೆಯ ಬಗ್ಗೆ ಮನವರಿಕೆ ಮಾಡಿಕೊಟ್ಟರು.

ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು ಸೂಚಿಸುವ ಔಷಧ ಹೊರಗಿನಿಂದ ಖರೀದಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದ್ದು, ಇದರಿಂದ ಬಡ ರೋಗಿಗಳ ಮೇಲೆ ಆರ್ಥಿಕ ಭಾರ ಬೀಳುತ್ತಿದೆ. ಆದ್ದರಿಂದ ತಕ್ಷಣವೇ ಅಗತ್ಯ ಔಷಧಿಗಳ ಸಮರ್ಪಕ ಪೂರೈಕೆ ಮಾಡುವಂತೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಆರೋಗ್ಯ ಸಚಿವ ದಿನೇಶ ಗುಂಡೂರಾವ ಅವರು, ಕೆಎಸ್ ಎಂಎಸ್ಸಿಎಲ್ ಮೂಲಕ ಔಷಧ ಪೂರೈಕೆ ವ್ಯವಸ್ಥೆಯಲ್ಲಿ ಮಹತ್ವದ ಸುಧಾರಣೆ ತರಲಾಗಿದೆ. ರಾಜ್ಯಾದ್ಯಂತ ಸರ್ಕಾರಿ ಆಸ್ಪತ್ರೆಗಳಿಗೆ ಔಷಧ ಪೂರೈಸುವ ಕಾರ್ಯ ನಡೆಯುತ್ತಿದ್ದು, ಟೆಂಡರ್ ಆಗಿದೆ. ಖರೀದಿ ಆದೇಶಗಳಾಗಿವೆ. ಮುಂದಿನ ದಿನಗಳಲ್ಲಿ ಔಷಧ ಕೊರತೆ ಉಂಟಾಗದಂತೆ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಲಿದೆ ಎಂದು ಭರವಸೆ ನೀಡಿದರು.

ವಿದ್ಯಾರ್ಥಿಗಳ ಸಮಸ್ಯೆಯ ಬಗ್ಗೆ ಪ್ರಸ್ತಾಪ:ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ ವಿದ್ಯಾರ್ಥಿವೇತನ, ಶುಲ್ಕ ವಿನಾಯಿತಿ, ಪ್ರೋತ್ಸಾಹಧನ ವಿತರಣೆಯಲ್ಲಿ ಉಂಟಾಗುತ್ತಿರುವ ಸಮಸ್ಯೆಗಳ ಬಗ್ಗೆ ಶಾಸಕರು ಚುಕ್ಕೆ ಗುರುತಿಲ್ಲದ ಪ್ರಶ್ನೆಯ ಮೂಲಕ ಸರ್ಕಾರದ ಗಮನ ಸೆಳೆದರು.

# ಜಿಲ್ಲಾ ದತ್ತಿ ಪ್ರಶಸ್ತಿಗೆ ಮಮತಾ ಮುಳಸಾವಳಗಿ ಹಾಗೂ ಅಶೋಕ ಬಡಿಗೇರ ಆಯ್ಕೆ



**ವಿಜಯಪುರ: ಮಾ.13:**ಕಡಣಿ ಸಾಹಿತ್ಯ ಸಮ್ಮೇಳನ ದತ್ತಿಯಿಂದ ಮಮತಾ ಮುಳಸಾವಳಗಿ(ಗುಮಶೆಟ್ಟಿ) ಅವರ ಮಮತೆಯ ಮರುಳಾರಾಧ್ಯ ಶತವಚನಗಳು ಕೃತಿಯು ಜಿಲ್ಲಾ ಮಟ್ಟದ ಅತ್ಯುತ್ತಮ ಕೃತಿ ಪ್ರಶಸ್ತಿ ಪುರಸ್ಕೃತರಾಗಿದ್ದಾರೆ.

ಅಲ್ಲದೆ ಕಡಣಿ ಗುರುವಂದನಾ ದತ್ತಿಯಿಂದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿಯನ್ನು ತಾರಾಪೂರ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಸಹ ಶಿಕ್ಷಕ ಅಶೋಕ ಬಡಿಗೇರ ಇವರನ್ನು ಆಯ್ಕೆ ಮಾಡಲಾಗಿದೆ.

ಈ ಪ್ರಶಸ್ತಿಯನ್ನು ರವಿವಾರ ದಿನಾಂಕ 15-03-2026 ಗಂಟೆಗೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಭಾಂಗಣದಲ್ಲಿ ಮುಂಜಾನೆ 11:00 ಗಂಟೆಗೆ ಜರುಗುವುದು. ಷ.ಬ್ರ. ಸಿದ್ದರಾಮ ಶಿವಾಚಾರ್ಯರು ಹಿರೇಮಠ ಸಂಸ್ಥಾನ ಕಲಕೇರಿ ಸಾನಿಧ್ಯ ವಹಿಸುವರು. ಡಾ. ವಿ.ಎಂ. ಬಾಗಾಯತ ವಿಶ್ರಾಂತ ಪ್ರಾಚಾರ್ಯರು ಉದ್ಘಾಟಕರಾಗಿ ಆಗಮಿಸಲಿದ್ದಾರೆ. ಡಿ.ಎಂ. ಘೋರ್ಪಡೆ ವಿಶ್ರಾಂತ ಪ್ರಾಚಾರ್ಯರು ಅಧ್ಯಕ್ಷತೆ ವಹಿಸಲಿದ್ದಾರೆ. ಶಿಲ್ಪಾ ಭಸ್ಮೆ ಜಿಲ್ಲಾ ಗೌರವ ಕಾರ್ಯದರ್ಶಿ ಹಾಗೂ ಸಿದ್ರಾಮಯ್ಯ ಲಕ್ಕುಂಡಿಮಠ ಅಧ್ಯಕ್ಷರು ತಾಲೂಕಾ ಕಸಾಪ ತಿಕೋಟಾ ಉಪನ್ಯಾಸ ನೀಡಲಿದ್ದಾರೆ. ಶಿವಶರಣ ಗುಂದಗಿ ಅಧ್ಯಕ್ಷರು, ತಾಲೂಕಾ ಕಸಾಪ ಆಲಮೇಲ, ಅಶೋಕ ಕೊಳಾರಿ ಗೌರವ ಕೋಶಾಧ್ಯಕ್ಷರು ಆಲಮೇಲ, ಡಾ. ರಮೇಶ ಕತ್ತಿ ಮಾಜಿ ಅಧ್ಯಕ್ಷರು ತಾಲೂಕಾ ಕಸಾಪ ಆಲಮೇಲ ಮುಖ್ಯ ಅತಿಥಿಗಳಾಗಿ ಆಗಮಿಸುತ್ತಾರೆ ಎಂದು ಪದಾಧಿಕಾರಿಗಳಾದ ಹಾಸಿಂಪೀರ ವಾಲಿಕಾರ, ಅಭಿಷೇಕ ಚಕ್ರವರ್ತಿ ಹಾಗೂ ಜಯಶ್ರೀ ಹಿರೇಮಠ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ


# ಕುಡಿವ ನೀರಿನ ಸಮಸ್ಯೆ ನಿವಾರಣೆಗೆ ವಿಶೇಷ ಸಭೆಗೆ ಜಿಗಜಿಣಗಿ ಆಗ್ರಹ



**ವಿಜಯಪುರ : ಮಾ.13:**ವಿಜಯಪುರ ಜಿಲ್ಲೆಯಲ್ಲಿ ಬೇಸಿಗೆಗೂ ಮುನ್ನವೇ ಬಿಸಲಿನ ಪ್ರಖರತೆ ಅಧಿಕವಾಗಿದೆ, ಬಿಸಿಲಿನ ತೀವ್ರತೆಯಿಂದ ಜಲಮೂಲಗಳು ಬತ್ತಿ ಕುಡಿಯುವ ನೀರಿಗೆ ವ್ಯತ್ಯಯ ಮೊದಲಾದ ಎದುರಾಗುವ ಸಮಸ್ಯೆಗಳಿಗೆ ಮುಂಜಾಗ್ರತಾ ಕ್ರಮವಾಗಿ ಕುಡಿಯುವ ನೀರಿಗೆ ಸಂಬಂಧಿಸಿದಂತೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ. ಪಾಟೀಲರು ಕೂಡಲೇ ಜನಪ್ರತಿನಿಧಿಗಳ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳ ವಿಶೇಷ ಸಭೆ ಕರೆಯಬೇಕು ಎಂದು ಸಂಸದ ರಮೇಶ ಜಿಗಜಿಣಗಿ ಒತ್ತಾಯಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಬೇಸಿಗೆ ಮುನ್ನವೇ ಬಿಸಿಲಿನ ತೀವ್ರತೆ ಅಧಿಕವಾಗಿದೆ, ವಿಜಯಪುರ ನಗರದಲ್ಲಿ 8 ರಿಂದ 10 ದಿನಕ್ಕೆ ನೀರು ಪೂರೈಕೆಯಾಗುತ್ತಿದ್ದು, ನೀರಿನ ಹಾಹಾಕಾರ ಉಂಟಾಗುವ ಎಲ್ಲ ಲಕ್ಷಣಗಳು ಗೋಚರಿಸುತ್ತಿವೆ. ಹೀಗಾಗಿ ಮುಂಬರುವ ಪರಿಸ್ಥಿತಿಗೆ ಈಗಿನಿಂದಲೇ ಸಿದ್ಧತೆ ಮಾಡಿಕೊಳ್ಳುವುದು ಒಳ್ಳೆಯದು, ನಗರ ಹಾಗೂ ಗ್ರಾಮೀಣ ಯಾವುದೇ ಭಾಗದಲ್ಲಿ ಕುಡಿಯುವ ನೀರಿನ ಸಮರ್ಪಕ ಪೂರೈಕೆಯಾಗಬೇಕು, ಈ ನಿಟ್ಟಿನಲ್ಲಿ ಆಡಳಿತ ಯಂತ್ರ ಚುರುಕಾಗಬೇಕು, ಅನೇಕ ವಿಷಯದಲ್ಲಿ ಬೇಜವಾಬ್ದಾರಿಯಿಂದ ನಡೆದುಕೊಳ್ಳುತ್ತಿರುವ ರಾಜ್ಯ ಕಾಂಗ್ರೆಸ್ ಸರ್ಕಾರ ಈ ವಿಷಯವನ್ನಾದರೂ ಗಂಭೀರವಾಗಿ ತೆಗೆದುಕೊಳ್ಳಬೇಕು, ಈ ನಿಟ್ಟಿನಲ್ಲಿಯೂ ಉದಾಸೀನತೆ ಪ್ರದರ್ಶಿಸುವುದು ಸರಿಯಲ್ಲ. ಹೀಗಾಗಿ ಜಿಲ್ಲಾ ಉಸ್ತುವಾರಿಸ ಸಚಿವ ಡಾ.ಎಂ.ಬಿ. ಪಾಟೀಲ ಕೂಡಲೇ ಕುಡಿಯುವ ನೀರಿನ ಸಮರ್ಪಕ ಪೂರೈಕೆ ವಿಷಯವಾಗಿ ಜನಪ್ರತಿನಿಧಿಗಳ ಹಾಗೂ ಅಧಿಕಾರಿಗಳ ಸಭೆ ಕರೆಯಬೇಕು, ಯಾವ ಸ್ಥಳದಲ್ಲಿ ಕುಡಿಯುವ ನೀರಿನ ಅಭಾವ ಎದುರಾಗುವ ಸಾಧ್ಯತೆ ಇದೆಯೋ ಅಲ್ಲಿ ಮುಂಜಾಗ್ರತಾ ಕ್ರಮವಾಗಿ ಯಾವ ಕ್ರಮ ಕೈಗೊಳ್ಳಬೇಕು ಎಂಬುದನ್ನು ಈಗಿನಿಂದಲೇ ಸಿದ್ಧತೆ ಮಾಡಿಕೊಳ್ಳುವುದು ಒಳಿತು, ಈ ಬಾರಿ ಬಿಸಲಿನ ತೀವ್ರತೆ ನೋಡಿದರೆ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣಿಸುವ ಸಾಧ್ಯತೆ ಅಲ್ಲಗಳೆಯುವಂತಿಲ್ಲ, ಜಾನುವಾರುಗಳಿಗೆ ಮೇವಿನ ಕೊರತೆಯೂ ಉಂಟಾಗಬಹುದು, ಈ ಹಿನ್ನೆಲೆಯಲ್ಲಿ ಈಗಿನಿಂದಲೇ ಪೂರ್ವ ಸಿದ್ಧತೆ ಕೈಗೊಂಡರೆ ಪರಿಸ್ಥಿತಿಯನ್ನು ಸಮರ್ಥವಾಗಿ ನಿಭಾಯಿಸಬೇಕು, ಈ ನಿಟ್ಟಿನಲ್ಲಿ ಕೂಡಲೇ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ. ಪಾಟೀಲ ವಿಶೇಷ ಮುತವರ್ಜಿ ವಹಿಸಿ ಕುಡಿಯುವ ನೀರಿನ ತೊಂದರೆಯಾಗದಂತೆ ಕೈಗೊಳ್ಳಬೇಕಾದ ಕಾರ್ಯಚಟುವಟಿಕೆಗಳ ಬಗ್ಗೆ ಸಮಗ್ರವಾಗಿ ಸಮಾಲೋಚನೆ ನಡೆಸಬೇಕು, ಎಲ್ಲ ಜನಪ್ರತಿನಿಧಿಗಳನ್ನು ಈ ಸಭೆಗೆ ಆಹ್ವಾನಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ,

# ಲೋಕೋಪಯೋಗಿ ಸಚಿವರ ಮನೆಗೆ ಮುತ್ತಿಗೆ: ನರಿಬೋಳ ಎಚ್ಚರಿಕೆ



**ಕಲಬುರಗಿ,ಮಾ.13-**ಜೇವರ್ಗಿ ತಾಲ್ಲೂಕಿನ ನರಿಬೋಳ ಚಾಮನೂರಿನ ಸೇತುವೆ ಕೆಲಸ ಕಂಪನಿಯ ನಿರ್ಲಕ್ಷದಿಂದ ಹಲವರು ವರ್ಷಗಳಿಂದ ಸ್ಥಗಿತಗೊಂಡಿತ್ತು. ಇನ್ನೇನು ಕೆಲಸ ಪ್ರಾರಂಭವಾಗಬೇಕಿದ್ದ ಸಂದರ್ಭದಲ್ಲಿ ಬಂದ ಪ್ರವಾಹಕ್ಕೆ ಸ್ಲಾಬ್ಗಳು ನದಿಯಲ್ಲಿ ಬಿದ್ದವು. ಆ ಸಂದರ್ಭದಲ್ಲಿ ಅಧಿಕಾರಿಗಳು ಗ್ರಾಮಸ್ಥರ ಜೊತೆ ಚರ್ಚಿಸಿ ಹಾನಿಯನ್ನು ಕಂಪನಿಯಿಂದ ವಸೂಲಿ ಮಾಡುತ್ತೇವೆ. ಕಂಪನಿಯನ್ನು ಕಪ್ಪು ಪಟ್ಟಿಗೆ ಸೇರಿಸಲು ಶಿಫಾರಸ್ಸು ಮಾಡುತ್ತೇವೆ ಎಂದು ತಿಳಿಸಿದ್ದರು. ಆದರೆ ಹಾನಿ ವಸೂಲಿಗೆ ಸರ್ಕಾರದ ಮುಖ್ಯ ಇಂಜಿನಿಯರ್ ಅವರಿಗೆ ಸೂಚಿಸಿದ್ದು ಕಂಪನಿ ಕಪ್ಪು ಪಟ್ಟಿಗೆ ಸೇರಿಸುವ ಕುರಿತಂತೆ ಯಾವುದೆ ಬೆಳವಣಿಗೆ ಕಂಡು ಬರುತ್ತಿಲ್ಲ. ಕೂಡಲೆ ಕಂಪನಿ ಕಪ್ಪು ಪಟ್ಟಿಗೆ ಸೇರಿಸುವ ನಿರ್ಧಾರ ಕೈಗೊಂಡು ಅಪೂರ್ಣಗೊಂಡಿರುವಂತಹ ಸೇತುವೆ ಕೆಲಸ ಪ್ರಾರಂಭಿಸಬೇಕು ನಿರ್ಲಕ್ಷಿಸಿದರೆ ಲೋಕೋಪಯೋಗಿ ಸಚಿವರ ಬೆಂಗಳೂರಿನ ಮನೆಗೆ ಮುತ್ತಿಗೆ ಹಾಕಬೇಕಾಗುತ್ತದೆ ಎಂದು ಕಲ್ಯಾಣ ಕರ್ನಾಟಕ ಪ್ರತ್ಯೇಕ ರಾಜ್ಯ ಹೋರಾಟ ಸಮಿತಿ ಅಧ್ಯಕ್ಷ ಎಂ.ಎಸ್. ಪಾಟೀಲ ನರಿಬೋಳ ಎಚ್ಚರಿಸಿದ್ದಾರೆ.

# ಜಿಎನ್‌ಡಿ ಇಂಜಿನೀಯರಿಂಗ್ ಕಾಲೇಜಿನಲ್ಲಿ ಪರಸ್ಪರ ಮತ್ತು ವ್ಯಕ್ತಿ ಕೌಶಲ್ಯ ನಿರ್ಮಾರ್ಣ ತರಬೇತಿ ಶಿಬಿರ



**ಬೀದರ:ಮಾ.13:**ಮಾರ್ಚ್ 12 ರಿಂದ 13, 2026 ರವರೆಗೆ ವಿದ್ಯಾರ್ಥಿಗಳಿಗಾಗಿ ಪರಸ್ಪರ ಮತ್ತು ವ್ಯಕ್ತಿತ್ವ ಕೌಶಲ್ಯ ನಿರ್ಮಾಣದ ಕುರಿತು ಎರಡು ದಿನಗಳ ತರಬೇತಿ ಶಿಬಿರವನ್ನು ಜಿಎಸ್‌ಡಿಇಸಿ ಬೀದರ್‌ನಲ್ಲಿ ಆಯೋಜಿಸಲಾಗಿದೆ.

ಗುರುನಾನಕ್ ದೇವ್ ಎಂಜಿನಿಯರಿಂಗ್ ಕಾಲೇಜು, ಬೀದರ ವಿಶ್ವೇಶ್ವರಯ್ಯ ಸಂಶೋಧನೆ ಮತ್ತು ನಾವೀನ್ಯತೆ ಪ್ರತಿಷಾ??ನದ ಸಹಯೋಗದೊಂದಿಗೆ, ಎಂಜಿನಿಯರಿಂಗ್ ವಿದ್ಯಾರ್ಥಿಗಳಲ್ಲಿ ಕೌಶಲ್ಯ, ಸಂಶೋಧನೆ, ನಾವೀನ್ಯತೆ ಮತ್ತು ಉದ್ಯಮಶೀಲತೆಯನ್ನು ಉತ್ತೇಜಿಸುವ ಗುರಿಯನ್ನು ಹೊಂದಿರುವ "ಸಂಶೋಧನ" ಎಂಬ ಎರಡು ದಿನಗಳ ತರಬೇತಿ ಶಿಬಿರವನ್ನು ಯಶಸ್ವಿಯಾಗಿ ಪ್ರಾರಂಭಿಸಲಾಯಿತು.

ಬೀದರ್‌ನ ಗುರುನಾನಕ್ ದೇವ್ ಎಂಜಿನಿಯರಿಂಗ್ ಕಾಲೇಜು ಮತ್ತು ಲಿಂಗರಾಜ್ ಅಪ್ಪಾ ಎಂಜಿನಿಯರಿಂಗ್ ಕಾಲೇಜಿನ ಬಿ.ಇ. ವಿದ್ಯಾರ್ಥಿಗಳ ಪ್ರಯೋಜನಕ್ಕಾಗಿ ಈ ಕಾರ್ಯಕ್ರಮವನ್ನು ನಡೆಸಲಾಯಿತು. ಸಂಶೋಧನಾ-ಆಧಾರಿತ ಮನಸ್ಥಿತಿ ಮತ್ತು ಉದ್ಯಮಶೀಲ ಚಿಂತನೆಯನ್ನು ಬೆಳೆಸಲು ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವುದರ ಜೊತೆಗೆ ಪರಸ್ಪರ ಕೌಶಲ್ಯ ಮತ್ತು ವ್ಯಕ್ತಿತ್ವ ಅಭಿವೃದ್ಧಿಯನ್ನು ಹೆಚ್ಚಿಸುವತ್ತ ತರಬೇತಿ ಶಿಬಿರವನ್ನು ಕೇಂದ್ರೀಕರಿಸಲಾಯಿತು.

ವಿಟಿಯು ಬೆಳಗಾವಿಯ ಸಂಶೋಧನದ ಯೋಜನಾ ವ್ಯವಸ್ಥಾಪಕರಾದ ಸಂಪನ್ಮೂಲ ವ್ಯಕ್ತಿ ಶ್ರೀ ಉರೂಜ್ ಅಕತರ್ ಖಾನ್ ಇನಾಮದಾರ್ ಅವರು ತರಬೇತಿ ಶಿಬಿರವನ್ನು ಉದ್ಘಾಟಿಸಿದರು. ಇಂದಿನ ಸ್ಪರ್ಧಾತ್ಮಕ ವೃತ್ತಿಪರ ವಾತಾವರಣದಲ್ಲಿ ಯಶಸ್ವಿಯಾಗಲು ತಾಂತ್ರಿಕ ಜ್ಞಾನದ ಜೊತೆಗೆ ಬಲವಾದ ಪರಸ್ಪರ ಸಾಮರ್ಥ್ಯಗಳನ್ನು ಅಭಿವೃದ್ಧಿಪಡಿಸುವ ಮಹತ್ವವನ್ನು ಅವರು ತಮ್ಮ ಉದ್ಘಾಟನಾ ಭಾಷಣದಲ್ಲಿ ಒತ್ತಿ ಹೇಳಿದರು. ವಿದ್ಯಾರ್ಥಿಗಳು ಸಂಶೋಧನೆ, ನಾವೀನ್ಯತೆ ಮತ್ತು ಉದ್ಯಮಶೀಲತಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳುವಂತೆ ಅವರು ಪ್ರೋತ್ಸಾಹಿಸಿದರು.

ಕಾಲೇಜಿನ ಪ್ರಾಂಶುಪಾಲೆ ಡಾ. ವೀಣಾ ಸೊರಗನ್ವಿ ಅವರು ಉದ್ಯಮ ಮತ್ತು ಸಮಾಜದ ವಿಕಸನಗೊಳ್ಳುತ್ತಿರುವ ಬೇಡಿಕೆಗಳನ್ನು ಪೂರೈಸಲು ಎಂಜಿನಿಯರಿಂಗ್ ವಿದ್ಯಾರ್ಥಿಗಳಲ್ಲಿ ಕೌಶಲ್ಯ, ಸಂಶೋಧನೆ, ನಾವೀನ್ಯತೆ ಮತ್ತು ಉದ್ಯಮಶೀಲತೆಯನ್ನು ಉತ್ತೇಜಿಸುವ ಮಹತ್ವವನ್ನು ಎತ್ತಿ ತೋರಿಸಿದರು ಮತ್ತು ತಮ್ಮ ವಿದ್ಯಾರ್ಥಿಗಳಿಗೆ ಅವಕಾಶವನ್ನು ಒದಗಿಸಿದ್ದಕ್ಕಾಗಿ ವಿಟಿಯುಗೆ ಧನ್ಯವಾದ ಅರ್ಪಿಸಿದರು.

ಎಐಎಂಎಲ್ ವಿಭಾಗದ ಅಸೋಸಿಯೇಟ್ ಪ್ರೊ. ಡಾ. ಜಾಸ್ಮಿನೀತ್ ಕೌರ್ ಸಭೆಯನ್ನುದ್ದೇಶಿಸಿ ವಿದ್ಯಾರ್ಥಿಗಳು ತಮ್ಮ ಭವಿಷ್ಯದ ವೃತ್ತಿಜೀವನಕ್ಕೆ ಅಗತ್ಯವಾದ ಸ್ಪಷ್ಟತೆ, ಆತ್ಮವಿಶ್ವಾಸ ಮತ್ತು ಪ್ರಾಯೋಗಿಕ ಮಾನ್ಯತೆಯನ್ನು ಪಡೆಯಲು ಸಂಶೋಧನದಂತಹ ಕಾರ್ಯಕ್ರಮವನ್ನು ಬಳಸಿಕೊಳ್ಳುವಂತೆ ಒತ್ತಾಯಿಸಿದರು.

ಬೀದರಿನ ಎಸ್‌ಎಇಸಿಯ ಪ್ರಾಂಶುಪಾಲರಾದ ಡಾ. ವಿನೀತಾ ಪಾಟೀಲ್ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡುತ್ತಾ, ಸಹಯೋಗದ ಶೈಕ್ಷಣಿಕ ಉಪಕ್ರಮಗಳ ಮೂಲಕ ವಿದ್ಯಾರ್ಥಿಗಳ ಸಾಮರ್ಥ್ಯಯಗಳನ್ನು ಬಲಪಡಿಸಲು ಸಹಾಯ ಮಾಡುವ ವಿದ್ಯಾರ್ಥಿಗಳಿಗೆ ತರಬೇತಿ ಶಿಬಿರವನ್ನು ಆಯೋಜಿಸಿದ್ದಕ್ಕಾಗಿ ವಿಟಿಯು ಬೆಳಗಾವಿ ಮತ್ತು ಜಿಎಸ್‌ಡಿಇಸಿಗೆ ಕೃತಜ್ಞತೆ ಸಲ್ಲಿಸಿದರು.

ಪರಸ್ಪರ ಕೌಶಲ್ಯಗಳ ಕುರಿತಾದ ಇಂತಹ ತರಬೇತಿ ಶಿಬಿರಗಳು ವಿದ್ಯಾರ್ಥಿ ಜೀವನದಲ್ಲಿ ಶಿಸ್ತನ್ನು ಬೆಳೆಸಲು ಸಹಾಯ ಮಾಡುತ್ತದೆ ಎಂದು ಕರ್ನಲ್ ರವಿದೀಪ್ ಸಿಂಗ್ ಹೇಳಿದರು.

ಈ ಕಾರ್ಯಕ್ರಮವನ್ನು ಡಾ. ಪ್ರದೀಪ್ ಕರಂಜೆ ಸಂಯೋಜಿಸಿದರು. ಶ್ರೀ ದೀಪಕ್ ಘೋಡೆ, ಎಲ್ಲಾ ಮುಖ್ಯಸ್ಥರು ಮತ್ತು ಜಿಎಸ್‌ಡಿಇಸಿ ಮತ್ತು ಎಸ್‌ಎಇಸಿ ನ ಸಿಬ್ಬಂದಿ ಸದಸ್ಯರು ಉದ್ಘಾಟನ ಸಮಾರಂಭದಲ್ಲಿ ಉಪಸ್ಥಿತರಿದ್ದರು.

# ಇಚ್ಛಾಶಕ್ತಿ ಇದ್ದರೆ ಸಾಧನೆ ಸಾಧ್ಯ: ಡಾ. ಸುನಿತಾ ಮಂಜುನಾಥ್




**ಬೀದರ್:** ಕರ್ನಾಟಕ ರಾಷ್ಟ್ರೀಯ ಶಿಕ್ಷಣ ಸಂಸ್ಥೆಯ ಅಧೀನದ 'ಲ್ಲಿರುವ ಕರ್ನಾಟಕ ಪದವಿ ಕಾಲೇಜಿನಲ್ಲಿ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಬೆಂಗಳೂರಿನ ಡಾ. ಸುನಿತಾ ಮಂಜುನಾಥ್ ಆಗಮಿಸಿ ಮಾತನಾಡಿ, ದೃಢವಾದ ಇಚ್ಛಾಶಕ್ತಿ ಇದ್ದರೆ ಜೀವನದಲ್ಲಿ ಏನು ಬೇಕಾದರೂ ಸಾಧಿಸಲು ಸಾಧ್ಯವಿದೆ ಎಂದು ಹೇಳಿದರು. ಇಂದಿನ ದಿನಗಳಲ್ಲಿ ವಿದ್ಯಾರ್ಥಿಗಳು ಸಾಮಾಜಿಕ ಜಾಲತಾಣಗಳ ಕಡೆ ಹೆಚ್ಚು ಆಕರ್ಷಿತರಾಗುತ್ತಿರುವುದು ಕಂಡುಬರುತ್ತಿದ್ದು, ಅದರ ಬದಲಾಗಿ ವಿದ್ಯಾಭ್ಯಾಸದ ಕಡೆ ಹೆಚ್ಚಿನ ಗಮನ ಹರಿಸಬೇಕು ಎಂದು ಸಲಹೆ ನೀಡಿದರು. ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಂಡು, ನಮ್ಮ ಸಾಧನೆಯನ್ನು ನೋಡಿ ಇತರರು ಅನುಸರಿಸುವಂತ ವ್ಯಕ್ತಿತ್ವವನ್ನು ಬೆಳೆಸಿಕೊಳ್ಳಬೇಕು. ವಿದ್ಯಾರ್ಥಿಗಳು ತಮ್ಮ ಮುಂದಿರುವ ಅವಕಾಶಗಳನ್ನು ಸದುಪಯೋಗಪಡಿಸಿಕೊಂಡು ವ್ಯಕ್ತಿತ್ವ ವಿಕಸನಗೊಳಿಸಿಕೊಳ್ಳಬೇಕು ಎಂದು ಅವರು ಹೇಳಿದರು.

ಸಮಾಜದಲ್ಲಿ ಮಹಿಳೆಯರಿಗೆ ಗೌರವಯುತ ಸ್ಥಾನಮಾನವಿದ್ದು, ಮಹಿಳೆಯರು ತಮ್ಮ ಸಾಮರ್ಥ್ಯವನ್ನು ಅರಿತು ಸಮಾಜದ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರವಹಿಸಬೇಕು ಎಂದು ಅಭಿಪ್ರಾಯಪಟ್ಟರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕರ್ನಾಟಕ ರಾಷ್ಟ್ರೀಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು ಹಾಗೂ ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀ ಬಸವರಾಜಜಾಬಶೆಟ್ಟಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಮಹಿಳೆಯರಿಗೆ ಸಂವಿಧಾನಾತ್ಮಕವಾಗಿ ಹಲವು ಅವಕಾಶಗಳು ದೊರಕಿದ್ದು, ಮಹಿಳೆಯರು ಅವುಗಳನ್ನು ಸದುಪಯೋಗಪಡಿಸಿಕೊಂಡು ಎಲ್ಲಾ ಕ್ಷೇತ್ರಗಳಲ್ಲಿಯೂ ತಮ್ಮ ಸಾಧನೆಯನ್ನು ಸಾಬೀತುಪಡಿಸುತ್ತಿದ್ದಾರೆ ಎಂದು ಹೇಳಿದರು.ನಮ್ಮ ಕಾಲೇಜಿನ ಉಪನ್ಯಾಸಕಿಯರು ಸಂಶೋಧನಾ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡುತ್ತಿದ್ದು,-ವಿದ್ಯಾರ್ಥಿನಿಯರು ವಿಶ್ವವಿದ್ಯಾಲಯ ಮಟ್ಟದಲ್ಲಿ Rank ಪಡೆದುಕೊಳ್ಳುವ ಮೂಲಕ ಸಂಸ್ಥೆಯ ಕೀರ್ತಿಯನ್ನು ಹೆಚ್ಚಿಸುತ್ತಿದ್ದಾರೆ. ವಿದ್ಯಾರ್ಥಿಗಳ ಸಮಗ್ರ ಅಭಿವೃದ್ಧಿಗೆ ಕಾಲೇಜಿನಲ್ಲಿ ವಿಶೇಷ ಗಮನ ನೀಡಲಾಗುತ್ತಿದೆ ಎಂದು ತಿಳಿಸಿದರು.

ಕಾಲೇಜಿನ ಪ್ರಾಚಾರ್ಯರಾದ ಶ್ರೀ.ಸೋಮನಾಥ ಬಿರಾದಾರ ಇವರು ಎಲ್ಲರನ್ನು ಸ್ವಾಗತಿಸಿ ಪ್ರಾಸ್ತಾವಿಕ ಮಾತನಾಡಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಷ್ಟ್ರೀಯ ಶಿಕ್ಷಣ ಸಂಸ್ಥೆಯ ನಿರ್ದೇಶಕರಾದ ವೀರಭದ್ರಪ್ಪ ಭೂಯ, ಡಾ. ಧೂಳಪ್ಪ ಪಾಟೀಲ್, ರವಿ ಹಲ್ಲಳ್ಳಿ, ಐಕ್ಯೂ ಎ ಸಿ.ಸಂಯೋಜಕರಾದ ಡಾ. ಸೋಮೇಶ್ವರಿ ಮುದ್ದಾ ಮಹಿಳಾ ಘಟಕದ ಸಂಯೋಜಕರಾದ ಸುನಿತಾ ಅಡ್ಡೆ ಸೇರಿದಂತೆ ಅನೇಕ ಉಪನ್ಯಾಸಕರು, ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

ಮಹಿಳಾ ದಿನಾಚರಣೆಯ ಅಂಗವಾಗಿ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿದ್ದು, ಅದರಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನಗಳನ್ನು ವಿತರಿಸಲಾಯಿತು. ಕಾರ್ಯಕ್ರಮವು ಉತ್ಸಾಹಭರಿತವಾಗಿ ಹಾಗೂ ಯಶಸ್ವಿಯಾಗಿ ನಡೆಯಿತು

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE